ಸಂಪುಟ : 9 ಸಂಚಿಕೆ 53 ಪುಟ : 4 ಬೆಲೆ: 3.00 ಬುಧವಾರ ಮಾರ್ಚ್ 27 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ

Volume : 9 Issue : 53 Pages : 4 Price : 3.00 Wednesday March 27 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

WALK IN INTERVIEW
Vacancy open
Bagalkot , Bijapur , Bidar , Kalaburgi, Mangalore , Belgaum
(Required For Bank Recovery and Collections)
- Filed collection Executive
- Two wheeler Must
- Salary up to 15000/- & Attractive Incentives Facility

Contact Number : 8310034934

ನೀರಿನ ಕೊರತೆ ಉಲ್ಬಣಿಸುವ ಸಾಧ್ಯತೆ । ಜಿಲ್ಲಾ ವಿಪತ್ತು ನಿರ್ವಹಣಾ ಸಮಿತಿ ಸಭೆಯಲ್ಲಿ ಜಿಲ್ಲಾಧಿಕಾರಿಗಳ ಸೂಚನೆ

ಬರ ನಿರ್ವಹಣೆಯಲ್ಲಿ ನಿಷ್ಕಾಳಜಿ, ನಿಧಾನಗತಿ ಸಹಿಸಲಾಗದು

■ ವಿಜಯಸಾಕ್ಷಿ ಸುದ್ದಿ, ಗದಗ

ಬರಗಾಲದ ಹಿನ್ನೆಲೆಯಲ್ಲಿ ಜಿಲ್ಲೆಯಲ್ಲಿ ಬರ ನಿರ್ವಹಣೆಯ ಗಂಭೀರತೆಯನ್ನು ಅರಿತು ಸಮರ್ಥವಾಗಿ ನಿಭಾಯಿಸಬೇಕು. ಸಾರ್ವಜನಿಕರಿಗೆ ಕುಡಿಯುವ ನೀರಿನ ಪೂರೈಕೆಗೆ ಪ್ರಥಮಾದ್ಯತೆ ನೀಡಬೇಕು ಎಂದು ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಮಂಗಳವಾರ ಜರುಗಿದ ಜಿಲ್ಲಾ ವಿಪತ್ತು ನಿರ್ವಹಣಾ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿ, ತಾಲೂಕಾ ಮಟ್ಟದಲ್ಲಿ ತಹಸೀಲ್ದಾರರ ನೇತೃತ್ವದಲ್ಲಿ ವಾರಕ್ಕೊಂದು ಸಲ ಬರನಿರ್ವಹಣೆ ಕುರಿತು ಸಭೆ ಜರುಗಿಸಬೇಕು. ಸಭೆಯಲ್ಲಿ ಜನ-ಜಾನುವಾರುಗಳಿಗೆ ಕುಡಿಯುವ ನೀರು ಪೂರೈಕೆಯನ್ನು ಸಮರ್ಪಕವಾಗಿ ಮಾಡಲು ಆದ್ಯತೆ ನೀಡಬೇಕು ಎಂದರು.

ಕುಡಿಯುವ ನೀರಿನ ಸಮಸ್ಯೆ ಎದುರಾದ ವಾರ್ಡ್ ಅಥವಾ ಗ್ರಾಮಗಳಲ್ಲಿ

ತಿಳಿಹೇಳಬೇಕು ಎಂದರು.

ಜಿಲ್ಲೆಯಲ್ಲಿ ಜೂನ್ ಅಂತ್ಯದವರೆಗೆ ಕುಡಿಯುವ ನೀರಿನ ಸಮರ್ಪಕ ಪೂರೈಕೆಯನ್ನು ಇರುವ ನೀರಿನ ಲಭ್ಯತೆಗನುಸಾರ ಅಧಿಕಾರಿಗಳು ಹಂಚಿಕೆ ಮಾಡಿ ಬರನಿರ್ವಹಣೆ ಮಾಡಬೇಕು. ಯಾವುದೇ ಕಾರಣಕ್ಕೂ ಅಧಿಕಾರಿಗಳು ಬರನಿರ್ವಹಣೆಯಲ್ಲಿ ನಿಷ್ಕಾಳಜಿ ಹಾಗೂ ನಿಧಾನಗತಿ ಕಾರ್ಯವನ್ನು ಸಹಿಸಲಾಗದು. ತಪ್ಪಿದಲ್ಲಿ ಶಿಸ್ತು ಕ್ರಮ ಜರುಗಿಸಬೇಕಾಗುತ್ತದೆ ಎಂದು ಡಿಸಿ ವೈಶಾಲಿ ಎಂ.ಎಲ್ ಅಧಿಕಾರಿಗಳಿಗೆ ಸ್ಪಷ್ಟಪಡಿಸಿದರು.

ಜಿ.ಪಂ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್ ಮಾತನಾಡಿ, ಬರನಿರ್ವಹಣೆ ಕುರಿತು ಖಾಸಗಿ ಬೋರ್‌ವೆಲ್ ಗುರುತಿಸಿದ, ಹೊಸದಾಗಿ ಬೋರ್‌ವೆಲ್ ಕೊರೆಸಲು ಗುರುತಿಸಿದ ಪ್ರದೇಶಗಳ ಮಾಹಿತಿ, ಪೈಪ್‌ಲೈನ್ ದುರಸ್ತಿಗೆ ಸಂಬಂಧಿಸಿದ ವಿವರವಾದ ವರದಿಯನ್ನು ವಾಟ್ಸ್‌ಅಪ್ ಮುಖಾಂತರ ಸಲ್ಲಿಸಬೇಕು. ತಮ್ಮ ಹಂತದಲ್ಲಿ ಸಮಸ್ಯೆ ಪರಿಹಾರವಾಗದಿದ್ದಲ್ಲಿ ತಕ್ಷಣ ಮೇಲಧಿಕಾರಿಗಳ ಗಮನಕ್ಕೆ ತಂದು ಪರಿಹಾರ ಕಂಡುಕೊಳ್ಳಬೇಕು ಎಂದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ ಮಾತನಾಡಿ, ಜಿಲ್ಲಾಧಿಕಾರಿಗಳು ಸೂಚಿಸಿದಂತೆ ನದಿ ದಡದಲ್ಲಿ ಹಾಗೂ ಕೆರೆಗಳಲ್ಲಿನ ನೀರನ್ನು ರೈತರು ತಮ್ಮ ಬೆಳೆಗಳಿಗೆ ಮೋಟರ್ ಮೂಲಕ ನೀರೆತ್ತುವುದನ್ನು ತಡೆಯಬೇಕು. ಅದಕ್ಕಾಗಿ ಈಗಾಗಲೇ ಶಿರಹಟ್ಟಿ, ಲಕ್ಷ್ಮೇಶ್ವರ ಹಾಗೂ ಮುಂಡರಗಿಯಲ್ಲಿ ಪೊಲೀಸ್ ಇಲಾಖೆಯ ಜಿಲ್ಲಾ ಮೀಸಲು ಪಡೆಯ ತುಕಡಿಯನ್ನು ತಾಲೂಕುವಾರು ನೀಡಲಾಗಿದೆ. ಅವುಗಳನ್ನು ಬಳಸಿಕೊಂಡು ರೈತರ ನೀರೆತ್ತುವ ಪಂಪ್‌ಸೆಟ್‌ಗಳನ್ನು ತೆರವುಗೊಳಿಸಬೇಕು. ಇನ್ನೂ ಹೆಚ್ಚಿನ ಪೊಲೀಸ್ ಸಿಬ್ಬಂದಿಗಳ ಅಗತ್ಯವಿದ್ದಲ್ಲಿ ಒದಗಿಸಲಾಗುವುದು ಎಂದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಸುರೇಖಾ, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಮಾರುತಿ ಬ್ಯಾಕೋಡ್, ಜಂಟಿ ಕೃಷಿ ನಿರ್ದೇಶಕಿ ತಾರಾಮಣಿ, ಡಿ.ಎಚ್.ಓ ಡಾ. ಎಸ್.ಎಸ್. ನೀಲಗುಂದ, ಉಪವಿಭಾಗಾಧಿಕಾರಿ ಡಾ.ವೆಂಕಟೇಶ ನಾಯ್ಕ, ಶಿಂಗಟಾಲೂರು ಏತನೀರಾವರಿ ಕಾರ್ಯನಿರ್ವಾಹಕ ಅಭಿಯಂತರ ಶಿವಮೂರ್ತಿ, ಪಿಆರ್‌ಇಡಿ ಕಾರ್ಯಪಾಲಕ ಅಭಿಯಂತರ ಆರ್.ಎ. ಗೌಡ್ರ ಸೇರಿದಂತೆ ಆಯಾ ತಾಲೂಕುಗಳ ತಾ.ಪಂ ಕಾರ್ಯನಿರ್ವಹಣಾಧಿಕಾರಿಗಳು, ತಹಸೀಲ್ದಾರರು, ಸ್ಥಳೀಯ ಸಂಸ್ಥೆಗಳ ಮುಖ್ಯಸ್ಥರು, ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

ಅನುದಾನದ ವಿವರ

ಬರ ನಿರ್ವಹಣೆಗಾಗಿ ಸರ್ಕಾರ ಅನುದಾನ ನೀಡಿದ್ದು, ಅಗತ್ಯಕ್ಕನುಸಾರ ಬಳಕೆ ಮಾಡಿಕೊಳ್ಳಲು ಈ ಕೆಳಕಂಡಂತೆ ಅನುದಾನ ಲಭ್ಯವಿದೆ. ಜಿಲ್ಲಾಧಿಕಾರಿಗಳ ಪಿಡಿ ಖಾತೆಯಲ್ಲಿ 2421.01 ಲಕ್ಷ ರೂ ಅನುದಾನ ಬರ ನಿರ್ವಹಣೆಗಾಗಿ ಲಭ್ಯವಿದ್ದು, ತಾಲೂಕುವಾರು ಎಲ್ಲ ತಹಸೀಲ್ದಾರರ ಖಾತೆಯಲ್ಲಿ ಒಟ್ಟಾರೆ 274.74 ಲಕ್ಷ ರೂ. ಅನುದಾನ ಲಭ್ಯವಿದೆ. ತಾಲೂಕುವಾರು ಗದಗ-41.81, ಗಜೇಂದ್ರಗಡ-21.06, ಲಕ್ಷ್ಮೇಶ್ವರ-7.53, ಮುಂಡರಗಿ-52.05, ನರಗುಂದ-67.64,ರೋಣ-34.39, ಶಿರಹಟ್ಟಿ-50.26 ಲಕ್ಷ ರೂ. ಅನುದಾನ ಲಭ್ಯವಿದೆ.

ಅಂತರ್ಜಲ ಮಟ್ಟ: ಬರಗಾಲದಿಂದಾಗಿ ಜಿಲ್ಲೆಯಲ್ಲಿ ಅಂತರ್ಜಲ ಮಟ್ಟ ಕುಸಿದಿದ್ದು, ಮುಂದಿನ ದಿನಗಳಲ್ಲಿ ಇನ್ನಷ್ಟು ಉಲ್ಬಣಿಸುವ ಲಕ್ಷಣಗಳಿವೆ. ಅಂತರ್ಜಜ ಮಟ್ಟದ ವಿವರ: ಗದಗ-9.84 ಮೀಟರ್, ಮುಂಡರಗಿ-7.12 ಮೀಟರ್, ಶಿರಹಟ್ಟಿ-13.58 ಮೀಟರ್, ಲಕ್ಷ್ಮೇಶ್ವರ-19.60 ಮೀಟರ್, ರೋಣ-13.07 ಮೀಟರ್, ಗಜೇಂದ್ರಗಡ-20.97 ಮೀಟರ್, ನರಗುಂದ-8.40 ಮೀಟರ್.

ಸಹಾಯವಾಣಿ: ಜಿಲ್ಲೆಯಲ್ಲಿ ಕುಡಿಯುವ ನೀರಿನ ಪೂರೈಕೆ ಸೇರಿದಂತೆ ಸಾರ್ವಜನಿಕರಿಗಾಗಿ ಸಹಾಯವಾಣಿಗಳನ್ನು ತೆರೆಯಲಾಗಿದ್ದು, ತಾಲೂಕಾವಾರು ಸಹಾಯವಾಣಿ ಸಂಖ್ಯೆಗಳು ಇಂತಿವೆ: ಜಿಲ್ಲಾಧಿಕಾರಿಗಳ ಕಚೇರಿ-08372-239177; ಗದಗ-08372-250009; ಗಜೇಂದ್ರಗಡ-08381-262131; ಲಕ್ಷ್ಮೇಶ್ವರ-08487-273273; ಮುಂಡರಗಿ-08371-262237; ನರಗುಂದ-08377-245243; ರೋಣ-08381-267239; ಶಿರಹಟ್ಟಿ-08487-242100.

ನೀರಿನ ಸಮಸ್ಯೆ ಉದ್ಭವಿಸಬಹುದಾದ ಪ್ರದೇಶಗಳು

ಜಿಲ್ಲೆಯ ಒಟ್ಟು 76 ಗ್ರಾಮಗಳನ್ನು ಕುಡಿಯುವ ನೀರಿನ ಸಮಸ್ಯೆ ಉದ್ಭವಿಸಬಹುದಾದ ಗ್ರಾಮಗಳೆಂದು ಗುರುತಿಸಲಾಗಿದೆ. ಗದಗ-14, ಗಜೇಂದ್ರಗಡ-4, ಲಕ್ಷ್ಮೇಶ್ವರ-8, ಮುಂಡರಗಿ-7, ನರಗುಂದ-18, ರೋಣ-17, ಶಿರಹಟ್ಟಿ-8 ಗ್ರಾಮಗಳು. ಜಿಲ್ಲೆಯ ನಗರ ಪ್ರದೇಶಗಳಲ್ಲಿ ಒಟ್ಟು 81 ವಾರ್ಡುಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಎದುರಾಗಬಹುದಾಗಿದೆ. ಬೆಟಗೇರಿ ನಗರಸಭೆಯ-21 ವಾರ್ಡುಗಳು, ಗಜೇಂದ್ರಗಡ ಪುರಸಭೆ-14, ಲಕ್ಷ್ಮೇಶ್ವರ ಪುರಸಭೆ-5, ಮುಂಡರಗಿ ಪುರಸಭೆ-11, ನರಗುಂದ ಪುರಸಭೆ-7, ರೋಣ ಪುರಸಭೆ-7, ಮುಳಗುಂದ-5, ನರೇಗಲ್ ಪಟ್ಟಣ ಪಂಚಾಯತ್-5, ಶಿರಹಟ್ಟಿ ಪಟ್ಟಣಪಂಚಾಯತ್-6 ವಾರ್ಡುಗಳಲ್ಲಿ ಮುಂದಿನ ದಿನಮಾನಗಳಲ್ಲಿ ನೀರಿನ ಸಮಸ್ಯೆ ಉಂಟಾಗಬಹುದು ಎಂದು ಗುರುತಿಸಲಾಗಿದೆ.

ಮೇವು ಬ್ಯಾಂಕ್

ಜಾನುವಾರುಗಳಿಗೆ ಮೇವಿನ ಅಭಾವ ತಲೆದೂರದಂತೆ ಮುಂಜಾಗ್ರತಾ ಕ್ರಮವಾಗಿ ಈಗಾಗಲೇ ಜಿಲ್ಲೆಯ 11 ಗ್ರಾಮಗಳಲ್ಲಿ ಮೇವು ಬ್ಯಾಂಕ್ ತೆರೆಯಲಾಗಿದೆ. ಗದಗ ತಾಲೂಕಿನ ಬಿಂಕದಕಟ್ಟಿ, ಕುರ್ತಕೋಟಿ, ಮುಳಗುಂದ, ಗಜೇಂದ್ರಗಡ ತಾಲೂಕಿನ ರಾಜೂರು, ಲಕ್ಷ್ಮೇಶ್ವರ, ಬಾಲೆಹೊಸೂರು, ಶಿಗ್ಲಿ, ಬಟ್ಟೂರು, ಅಡರಕಟ್ಟಿ, ಮುಂಡರಗಿ ತಾಲೂಕಿನ ಡಂಬಳ, ರೋಣ ತಾಲೂಕಿನ ಕೊತಬಾಳಗಳಲ್ಲಿ ಮೇವು ಬ್ಯಾಂಕ್ ತೆರೆಯಲಾಗಿದೆ.

ಪರಿಹಾರ ವಿತರಣೆ

ಜಿಲ್ಲೆಯಲ್ಲಿ 2023 ರ ಮುಂಗಾರು ಹಂಗಾಮಿನಲ್ಲಿ ಮಳೆ ಕೊರತೆಯಿಂದ ಕೃಷಿ ಮತ್ತು ತೋಟಗಾರಿಕೆ ಬೆಳೆಗಳ ಹಾನಿಗೆ 113778 ಫಲಾನುಭವಿಗಳಿಗೆ ತಲಾ 2 ಸಾವಿರ ರೂ.ಗಳಂತೆ ಒಟ್ಟು 22,41,78,565 ರೂ. ಪರಿಹಾರ ವಿತರಿಸಲಾಗಿದೆ. ತಾಲೂಕಾವಾರು ನರಗುಂದ-25988, ರೋಣ-10703, ಗದಗ-13818, ಶಿರಹಟ್ಟಿ-17325, ಮುಂಡರಗಿ-12905, ಗಜೇಂದ್ರಗಡ - 18680, ಲಕ್ಷ್ಮೇಶ್ವರ-14269 ರೈತರಿಗೆ ಪರಿಹಾರ ಒದಗಿಸಲಾಗಿದೆ.

ಎಪಿಎಂಸಿ ಕಾಯ್ದೆ ತಿದ್ದುಪಡಿ ಕುರಿತು ಸಭೆ ಇಂದು

■ ವಿಜಯಸಾಕ್ಷಿ ಸುದ್ದಿ, ಗದಗ

ಎಪಿಎಂಸಿ ಯಾರ್ಡ್‌ನ ಎಪಿಎಂಸಿ ಖರೀದಿ ವರ್ತಕರ ಸಂಘದ ಸಭಾ ಭವನದಲ್ಲಿ ಮಾರ್ಚ್ 27ರಂದು ಮಧ್ಯಾಹ್ನ 12 ಗಂಟೆಗೆ ಎಪಿಎಂಸಿ ಕಾಯ್ದೆ ತಿದ್ದುಪಡಿ ಹಾಗೂ ಎಪಿಎಂಸಿಗೆ ಅಫಿಡವಿಟ್ ನೀಡುವ ದಿನಾಂಕ ನಿಗದಿಪಡಿಸುವ ಕುರಿತು ಸಭೆಯನ್ನು ಆಯೋಜಿಸಿ ಸರ್ವ ಸದಸ್ಯರ ಒಪ್ಪಿಗೆ ಮೇರೆಗೆ ನಿರ್ಣಯ ಕೈಗೊಳ್ಳಲು ಸಭೆಯನ್ನು ಆಯೋಜಿಸಲಾಗಿದೆ.

ಸಭೆಯ ಅಧ್ಯಕ್ಷತೆಯನ್ನು ಎಪಿಎಂಸಿ ಖರೀದಿ ವರ್ತಕರ ಸಂಘದ ಅಧ್ಯಕ್ಷ ಶೇಖರಪ್ಪ ಫ.ಗದ್ದಿಕೇರಿ ವಹಿಸಲಿದ್ದಾರೆ. ಕಾರಣ, ಎಪಿಎಂಸಿಯ ಸಮಸ್ತ ಖರೀದಿ ವರ್ತಕರು ಸಭೆಯಲ್ಲಿ ಪಾಲ್ಗೊಂಡು ಸೂಕ್ತ ಸಲಹೆ-ಸೂಚನೆಗಳನ್ನು ನೀಡಬೇಕೆಂದು ಸಂಘದ ಗೌರವ ಕಾರ್ಯದರ್ಶಿ ರಾಘವೇಂದ್ರ ಎಸ್.ಕಾಲವಾಡ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಇಂದಿನ ನೀರು ಪೂರೈಕೆ ವಿವರ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ಅವಳಿ ನಗರದಲ್ಲಿ ಮಾರ್ಚ್ 27ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು ಎಂದು ನಗರಸಭೆ ಪೌರಾಯುಕ್ತರು ತಿಳಿಸಿದ್ದಾರೆ.

ಸ್ಥಳಗಳ ವಿವರ : ವಾರ್ಡ್ ನಂ. 22ರಲ್ಲಿ ದೊಡ್ಡ ಮಸೂತಿ ಭಾಗ, 200 ಮನೆ ಲೈನ್, 600 ಮನೆ ಲೈನ್, 1200 ಮನೆ ಪ್ಲಾಟ್ ಲೈನ್, ವಾರ್ಡ್ ನಂ. 4ರಲ್ಲಿ ಗೌರಿ ಗುಡಿ, ಬ್ಯಾಳಿಯವರ ಲೈನ್, ಟರ್ನಲ್ ಪೇಟೆ ಪೂರ್ತಿ ಭಾಗ, ಮಾಜಿ ಮೇಂಬರ್ ಮನೆ ಲೈನ್, ಖಾಜಿಯವರ ಲೈನ್, ಬಿ.ಎಸ್.ಎನ್.ಎಲ್. ಆಫೀಸ್, ಕಣವಿ ಪ್ಲಾಟ್, 275 ಮನೆ, 200 ಮನೆ, ಸುಣ್ಣದ ಭಟ್ಟಿ, ಗಾರ್ಡನ್ ಲೈನ್, ಪೆಟ್ರೋಲ್ ಬಂಕ್ ಭಾಗ-1,2,

ವಾರ್ಡ್ ನಂ. 29ರಲ್ಲಿ ರಾಜೀವ ಗಾಂಧಿ ನಗರ, ಬನ್ನಿಕಟ್ಟಿ, ಪಾಪಡೇಯವರ ಲೈನ್, ನೆಲ್ಸನ್ ಮಂಡೇಲಾ ಲೈನ್, ವಾರ್ಡ್ ನಂ. 11,12ರಲ್ಲಿ ಇರಾಣಿ ಕಾಲೋನಿ, ಕರಿಯಮ್ಮನ ಕಲ್ಲು, ಗಣೇಶ ಗುಡಿ, ಹನುಮಂತ ದೇವರ ಗುಡಿ ಲೈನ್, ಗಾರ್ಡನ್ ಲೈನ್ ಉಳಿದ ಕೆಲವು ಭಾಗಗಳು,

ವಾರ್ಡ್ ನಂ. 28ರಲ್ಲಿ ದೇವಗಿರಿ ಮಾಸ್ತರ ಲೈನ್, ಸಂತೋಷ ಕಿರಾಣಿ ಅಂಗಡಿ, ಅನ್ನಪೂರ್ಣ ಅಪಾರ್ಟಮೆಂಟ್, ಕಟ್ಟಿ ಟೀಚರ್ ಲೈನ್, ಕೊರ್ಲಳ್ಳಿ ಮಾಸ್ತರ್ ಲೈನ್, ಅಬ್ಬಿಗೇರಿ ಗವಾಯಿಗಳ ಆಶ್ರಮ, ಕೃಷ್ಣ ಟ್ಯೂಷನ್ ಲೈನ್, ಸೊಲ್ಲಾಪಟ್ಟಿ ಲೈನ್, ವಾರ್ಡ್ ನಂ. 5,6,10 ರಲ್ಲಿ ರಂಗಪ್ಪಜ್ಜನ ಮಠ 2ನೇ ಬ್ಯಾಚ್, ಅಂಬೇಡ್ಕರ್ ನಗರದ ಕೆಲವು ಉಳಿದ ಭಾಗಗಳು, ವಾರ್ಡ್ ನಂ. 33, 30ರಲ್ಲಿ ಜಾಕೀರ ಹುಸೇನ್ ಕಾಲೋನಿಯ ಉಳಿದ ಭಾಗಗಳು.

ತುಂಗಭದ್ರಾ ನದಿಯಿಂದ ಪೂರೈಕೆ ಮಾಡಿದ ನೀರನ್ನು ಕಡ್ಡಾಯವಾಗಿ ಕಾಯಿಸಿ ಆರಿಸಿ ಕುಡಿಯಲು ಉಪಯೋಗಿಸಲು ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಜಿಂದೆಶ್ಯಾವಲಿ ಉರುಸು ಇಂದು

■ ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಇಲ್ಲಿಯ ಪವಾಡ ಪುರುಷ ಹಜರತ್ ಜಿಂದೆಶ್ಯಾವಲಿಯವರ 56ನೇ ವರ್ಷದ ಉರುಸು ಉತ್ಸವ ಮಾರ್ಚ್ 27 ರಂದು ಮುಸ್ಲಿಮ್ ಜಮಾತ ಅಂಜುಮನ್ ಏ ಇಸ್ಲಾಮ್ ಕಮಿಟಿಯ ಆಶ್ರಯದಲ್ಲಿ ಜರುಗಲಿದೆ.

ಲಕ್ಕುಂಡಿ ಮತ್ತು ಕದಾಂಪೂರ ಗ್ರಾಮದ ಮಧ್ಯೆ ಇರುವ ಜಿಂದೆಶ್ಯಾವಲಿ ದರ್ಗಾದ ಗದ್ದುಗೆ ಮೇಲೆ ಬೆಳಿಗ್ಗೆ ಪುಷ್ಪ ಗುಚ್ಛ ಸಮರ್ಪಿಸುವ ಮೂಲಕ ಉರುಸು ಕಾರ್ಯಕ್ರಮ ಆರಂಭವಾಗಲಿದೆ. ರಾತ್ರಿ 9.30ಕ್ಕೆ ವಿಧಿ ವಿಧಾನಗಳೊಂದಿಗೆ ಜ್ಯೋತಿ ಬೆಳಗಿಸುವ ವಿಶೇಷ ಕಾರ್ಯಕ್ರಮ ನೆರವೇರಲಿದೆ. 9 ಗಂಟೆಗೆ ಕಲಕತ್ತಾದ ಜಹಾಂಗೀರ್ ಅಲಮ್‌ನೂರಿ ಅವರಿಂದ ಬಯಾನ ಕಾರ್ಯಕ್ರಮ, ನಂತರ ರಿವಾಯತ್ ಕವಾಲಿ ಜಾನಪದ ಸಂಗೀತ ಕಾರ್ಯಕ್ರಮಗಳು ನಡೆಯಲಿವೆ.

ವಿಶೇಷವಾಗಿ ಸಂದಲ್ ಗಂಧ ಮೆರವಣಿಗೆಯಲ್ಲಿ ಗುಡಗೇರಿಯ ತಾಜ್ ಮ್ಯೂಜಿಕಲ್ ಬ್ರಾಸ್ ಬ್ಯಾಂಡ್ ಕಂಪನಿಯಿಂದ ಕವಾಲಿ ರಸಮಂಜರಿ ಕಾರ್ಯಕ್ರಮ ಜರುಗಲಿದೆ. ಮಾ.28ರಂದು ತವಾಫ್(ಚಿರಶಾಂತಿ ಪ್ರಾರ್ಥನೆ) ನಡೆಯಲಿದೆ. ಎಪ್ರಿಲ್ 7ರಂದು ಸಂಜೆ ಧ್ವಜ ಇಳಿಸಲಾಗವುದು. ನಂತರ ಉರುಸು ಲೆಕ್ಕ ಪತ್ರ ಪರಿಶೀಲನೆ ಸಭೆ ನಡೆಯುವುದು ಎಂದು ಉರುಸು ಕಮಿಟಿ ಪ್ರಕಟಣೆ ತಿಳಿಸಿದೆ.

ಮತದಾನ ಬಹಿಷ್ಕಾರ ಹಿಂಪಡೆದ ತಿಮ್ಮಾಪುರ ಗ್ರಾಮಸ್ಥರು

■ ವಿಜಯಸಾಕ್ಷಿ ಸುದ್ದಿ, ಗದಗ

ಸಮಿಪದ ತಿಮ್ಮಾಪೂರ ಗ್ರಾಮದಲ್ಲಿ ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಲೋಕಸಭಾ ಚುನಾವಣೆ ಬಹಿಷ್ಕಾರ ಮಾಡಲು ನಿರ್ಧರಿಸಿದ್ದ ಗ್ರಾಮಸ್ಥರೊಂದಿಗೆ ಮಂಗಳವಾರ ಗದಗ ಹಾಗೂ ರೋಣ ತಾಲ್ಲೂಕು ದಂಡಾಧಿಕಾರಿಗಳು, ತಾಲೂಕು ಕಾರ್ಯನಿರ್ವಾಹಕ ಅಧಿಕಾರಿಗಳು, ಕಾರ್ಯಪಾಲಕ ಅಭಿಯಂತರರು, ಪೊಲೀಸ್ ಇಲಾಖೆಯ ತಂಡವು ಕರ್ನಾಟಕ ರಾಜ್ಯ ರೈತ ಸಂಘದ ಗ್ರಾಮ ಘಟಕ, ಗ್ರಾ.ಪಂ ಅಧ್ಯಕ್ಷರು, ಉಪಾಧ್ಯಕ್ಷರು, ಸದಸ್ಯರು ಹಾಗೂ ಸಾರ್ವಜನಿಕರೊಂದಿಗೆ ಸಭೆ ನಡೆಸಿದರು.

ಸಾರ್ವಜನಿಕರ ದೂರಿನನ್ವಯ ತಿಮ್ಮಾಪೂರ ಗ್ರಾಮದಲ್ಲಿ ಅನೇಕ ವರ್ಷಗಳಿಂದ ಅನುಷ್ಠಾನಗೊಳ್ಳದೆ, ಅನುಷ್ಠಾನಗೊಂಡರೂ ಪೂರ್ಣಗೊಳ್ಳದೆ ಇರುವ ಕಾಮಗಾರಿಗಳಾದ ತಿಮ್ಮಾಪೂರ ಗ್ರಾಮದಿಂದ ಕೋಟುಮಚಿಗಿ ಗ್ರಾಮಕ್ಕೆ ಸಂಪರ್ಕ ಕಲ್ಪಿಸುವ ರಸ್ತೆ ಡಾಂಬರೀಕರಣ, ಕಾಣೆಹಳ್ಳಕ್ಕೆ ಮೇಲು ಸೇತುವೆ ನಿರ್ಮಾಣ ಮಾಡುವುದು, ತಿಮ್ಮಾಪೂರ ಗ್ರಾಮದಿಂದ ಸೋಂಪೂರ ಗ್ರಾಮಕ್ಕೆ ಸಂಪರ್ಕ ಕಲ್ಪಿಸುವ ರಸ್ತೆ ಡಾಂಬರೀಕರಣ, ಪ್ರಾಥಮಿಕ ಆರೋಗ್ಯ ಕೇಂದ್ರ ನಿರ್ಮಾಣ ಮಾಡುವುದು, ನೂತನ ರಾಷ್ಟ್ರೀಕೃತ ಬ್ಯಾಂಕ್ ಶಾಖೆ ತೆರೆಯುವದು, ರಸ್ತೆ ದುರಸ್ತಿ, ನೀರು ಪೂರೈಕೆ, ಮಹಿಳೆಯರಿಗೆ 2 ಸಾರ್ವಜನಿಕ ಶೌಚಾಲಯ ನಿರ್ಮಾಣ, ಹರ್ಲಾಪೂರ ಹಾಗೂ ಹಳ್ಳಿಗುಡಿ ರಸ್ತೆ ಡಾಂಬರೀಕರಣ ಮಾಡುವುದು, ರೈತರು ತಮ್ಮ ಕೃಷಿ ಜಮೀನುಗಳಿಗೆ ಹೋಗುವ ದಾರಿಯನ್ನು ದುರಸ್ತಿ ಮಾಡುವ ಕುರಿತಾಗಿ ಸಂಬಂಧಿಸಿದ ಇಲಾಖೆಗಳೊಂದಿಗೆ ಮತ್ತೊಂದು ಸುತ್ತಿನ ತುರ್ತು ಸಭೆ ಆಯೋಜಿಸಿ ಕ್ರಮವಹಿಸಲಾಗುವುದೆಂದು ತಿಳಿಸಿದರು. ಶೀಘ್ರವೇ ಗ್ರಾಮದಲ್ಲಿ ನೀರು ಹಾಗೂ ನೈರ್ಮಲ್ಯ ಸಂಬಂಧಿತ ಕೆಲಸಗಳನ್ನು ವಿಲೇವಾರಿ ಮಾಡಲು ಕ್ರಮಕೈಗೊಳ್ಳಲಾಗುವದು ಎಂದು ತಿಳಿಸಿದರು.

ಹಾಜರಿದ್ದ ಗ್ರಾಮಸ್ಥರಿಗೆ ಅಧಿಕಾರಿ ವರ್ಗವು ಕಡ್ಡಾಯವಾಗಿ ಮತದಾನ ಮಾಡುವಂತೆ ತಿಳಿಸುತ್ತಾ, ಪ್ರತಿಜ್ಞಾ ವಿಧಿ ಬೋಧನೆ ಮಾಡಿಸಿ ಸಭೆಯನ್ನು ಮುಕ್ತಾಯಗೊಳಿಸಿದರು.

ಮತದಾರರ ಜಾಗೃತಿ ಕುರಿತು ಜಾಹೀರಾತು ನೀಡಲು ಮನವಿ

■ ವಿಜಯಸಾಕ್ಷಿ ಸುದ್ದಿ, ಗದಗ

ಲೋಕಸಭಾ ಚುನಾವಣೆ ಪ್ರಯುಕ್ತ ಮತದಾರರಲ್ಲಿ ಜಾಗೃತಿ, ಅರಿವು ಮೂಡಿಸುವ, ಮತ ಚಲಾವಣೆಯ ಕುರಿತ ಜಾಹೀರಾತುಗಳನ್ನು ಜಿಲ್ಲಾ ಮತ್ತು ಪ್ರಾದೇಶಿಕ ಪತ್ರಿಕೆಗಳಿಗೆ ಬಿಡುಗಡೆ ಮಾಡಲು ಒತ್ತಾಯಿಸಿ ಗದಗ ಜಿಲ್ಲಾ ಕಾರ್ಯನಿರತ ದಿನಪತ್ರಿಕೆಗಳ ಸಂಪಾದಕರ ಸಂಘದಿಂದ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಲಾಯಿತು.

ಇದೇ ತಿಂಗಳ 16ರಂದು ಲೋಕಸಭಾ ಚುನಾವಣೆಯ ವೇಳಾಪಟ್ಟಿಯನ್ನು ಕೇಂದ್ರ ಚುನಾವಣಾ ಆಯೋಗದಿಂದ ಮತ್ತು ರಾಜ್ಯ ಚುನಾವಣಾ ಆಯೋಗದಿಂದ ರಾಜ್ಯದಲ್ಲಿ ಅಧಿಕೃತವಾಗಿ ಹೊರಡಿಸಲಾಗಿದೆ. ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ರಾಜ್ಯದ ಮ

ಸಾಕ್ಷಿ ಸುಭಾಷಿತ

ಸಾಧ್ಯವಾದರೆ ಹತ್ತು ಜನರಿಗೆ ನೆರವಾಗು, ಆಗದಿದ್ದರೆ ಹಾದಿಯಲ್ಲಿ ಕಾಣುವ ಗಾಜಿನ ಚೂರನ್ನಾದರೂ ಹೆಕ್ಕಿ ಕಸದ ತೊಟ್ಟಿಗೆ ಹಾಕು.

–ಕಣ್ಣದಾಸನ್

ಸಂಪಾದಕೀಯ

ಅಧಿಕಾರ ಎನ್ನುವ ಅಮಲು

ದೇಶದಲ್ಲಿ ಈಗ ಲೋಕಸಭೆ ಚುನಾವಣೆಯದ್ದೆ ಮಾತು. ಚುನಾವಣೆ ಪ್ರಜಾಪ್ರಭುತ್ವ ವ್ಯವಸ್ಥೆಯನ್ನ ಬಲಗೊಳಿಸುತ್ತದೆ. ಪ್ರಜಾಪ್ರಭುತ್ವ ವ್ಯವಸ್ಥೆ ಬಲಗೊಳ್ಳಲು ಚುನಾವಣೆಯೇ ಕಾರಣ ಎನ್ನುವುದು ರಾಜಕೀಯ ವ್ಯಾಖ್ಯಾನ.

ಆದರೆ ರಾಜಕಾರಣಿಗಳಿಗೆ ಚುನಾವಣೆ ಎನ್ನುವುದು ಅಧಿಕಾರ ಹಿಡಿಯುವ ಒಂದು ಅವಕಾಶ. ಐದು ವರ್ಷದ ಅಧಿಕಾರಾವಧಿಯನ್ನು ಅನುಭವಿಸಿಯೂ, ಜನಸೇವೆಯನ್ನು ಮಾಡದೆ, ಸಂತೃಪ್ತಿಯನ್ನು ಕಾಣದೆ, ಮತ್ತೊಮ್ಮೆ ಅಧಿಕಾರಕ್ಕಾಗಿ ಕಾದು ಕುಳಿತವರಿಗೆ ಒದಗಿ ಬರುವ ಅವಕಾಶವೇ ಚುನಾವಣೆ ಎನ್ನುವಂತಾಗಿದೆ.

ಜನಸೇವೆಯೇ ರಾಜಕೀಯದ ಉದ್ದೇಶವಾಗಿತ್ತು. ಆದರೆ ಅದರ ವ್ಯಾಖ್ಯಾನ ಈಗ ಬದಲಾಗಿದೆ. ಹಣ ಮಾಡುವುದು ಈಗ ರಾಜಕೀಯದ ಉದ್ದೇಶ. ಕೋಟಿ ಕೋಟಿ ಸಂಪಾದನೆ ಮಾಡಿದವರಿಂದ ಮಾತ್ರ ರಾಜಕಾರಣ ಮಾಡಲು ಸಾಧ್ಯ ಎನ್ನುವಂತಹ ವಾತಾವರಣವಿದೆ. ಹಣ ಇಲ್ಲದಿದ್ದರೆ ರಾಜಕಾರಣ ಇಲ್ಲ ಎನ್ನುವುದು ಜನಸಾಮಾನ್ಯರಿಗೂ ಗೊತ್ತಿರುವ ಸಂಗತಿಯೇ.

ಅಧಿಕಾರ ಎನ್ನುವ ಅಮಲು ಯಾವ ಮಟ್ಟಿಗೆ ಇರುತ್ತದೆ ಎನ್ನುವುದಕ್ಕೆ ದೆಹಲಿ ಸಿಎಂ ಅರವಿಂದ ಕೇಜ್ರಿವಾಲ್ ಒಂದು ಉದಾಹರಣೆ. ಭ್ರಷ್ಟಾಚಾರ ವಿರೋಧಿಸಿ ಅಧಿಕಾರಕ್ಕೆ ಬಂದ ಅರವಿಂದ ಕೇಜ್ರಿವಾಲ್, ಅದೇ ಭ್ರಷ್ಟಾಚಾರ ಒಂದರ ಪ್ರಕರಣದಲ್ಲಿ ಸಿಲುಕಿ ಜೈಲು ಶಿಕ್ಷೆ ಅನುಭವಿಸುತ್ತಿದ್ದಾರೆ.

ಜನಸೇವೆ ಮಾಡುವ ಇಚ್ಛೆ ಇದ್ದಿದ್ದರೆ, ತಮ್ಮ ಸ್ಥಾನಕ್ಕೆ ರಾಜೀನಾಮೆ ಕೊಟ್ಟು, ತಮ್ಮದೇ ಪಕ್ಷದ ಅಭ್ಯರ್ಥಿ ಒಬ್ಬರನ್ನ ಮುಖ್ಯಮಂತ್ರಿಯಾಗಿ ಮಾಡಬಹುದಿತ್ತು. ಆದರೆ ಅಧಿಕಾರ ಎನ್ನುವ ಅಮಲು ತೆಲಗೇರಿಸಿಕೊಂಡಿರುವ ಕೇಜ್ರಿವಾಲ್, ಜೈಲಿನಲ್ಲಿದ್ದರೂ ಕುರ್ಚಿ ಬಿಟ್ಟು ಇಳಿಯುವ ಮಾತಾಡುತ್ತಿಲ್ಲ.

ಇನ್ನು ಗಣಿ ಹಗರಣದಲ್ಲಿ ಜೈಲು ಕಂಡ ಕಾರಣಕ್ಕೆ ಪಕ್ಷದಿಂದ ಉಚ್ಚಾಟನೆಗೊಂಡಿದ್ದ ಜನಾರ್ದನ್ ರೆಡ್ಡಿ ಅವರನ್ನು ಬಿಜೆಪಿ ಮತ್ತೆ ಪಕ್ಷಕ್ಕೆ ಸೇರಿಸಿಕೊಂಡಿದೆ. ಕಾರಣ ಜನಸೇವೆ ಅಲ್ಲ, ಅಧಿಕಾರದ ಕಬಳಿಕೆ ಎನ್ನುವುದು ಎಂಥವರಿಗಾದರೂ ಅರ್ಥವಾಗುವ ಸತ್ಯ.

ಇನ್ನು ಜೆಡಿಎಸ್ ಮತ್ತು ಕಾಂಗ್ರೆಸ್ ಬಗ್ಗೆ ಹೇಳುವುದಾದರೆ, ಅಧಿಕಾರಕ್ಕಾಗಿ ಕುಟುಂಬ ರಾಜಕಾರಣವನ್ನು ಒಂದು ಸಂಸ್ಕೃತಿಯಾಗಿ ಪರಿಪಾಲಿಸಿಕೊಂಡು ಹೊರಟಿದ್ದಾರೆ. ಕಾರಣ ಅಧಿಕಾರದ ಆಸೆ. ಅಧಿಕಾರ ಎನ್ನುವುದು ಅಮಲು. ಅದು ಅಷ್ಟು ಸುಲಭಕ್ಕೆ ಇಳಿಯುವುದಿಲ್ಲ.

ಇಂದು 'ವಿಶ್ವ ರಂಗಭೂಮಿ ದಿನಾಚರಣೆ' । ರಂಗ ಕಲೆಗೆ ದುಡಿದ, ಮಿಡಿದ ಮನಗಳಿಗೆ ನಮನ

ಬದುಕಿನ ಪ್ರಬುದ್ಧತೆ ಹೆಚ್ಚಿಸುವ ರಂಗ ಕಲೆ

ಆ ನಟವರ ನಾದಶಿವನ ಸ್ತುತಿಯನ್ನು ಕೃತಿಯಾರಂಭದಲ್ಲಿಯೇ ಮಾಡಿದಂತೆ, ನಟನ ಆಂಗಿಕ ಅಭಿನಯ, ಸಂಭಾಷಣೆ, ವೇಷ-ಭೂಷಣದೊಂದಿಗೆ ಮಾನವನ ನಿತ್ಯ ಬದುಕಿನಲ್ಲಾದ ಭಾವನೆಯನ್ನು, ಕಲಾವಿದನ ಅಭಿವ್ಯಕ್ತಿಯನ್ನು ರಂಗಭೂಮಿಯ ಮೂಲಕ ವ್ಯಕ್ತಪಡಿಸುವ ಮಾಧ್ಯಮವೇ 'ರಂಗಕಲೆ'

ಬ್ರಹ್ಮನು ಋಗ್ವೇದದಿಂದ ಪಠ್ಯ-ಗೀತವನ್ನು, ಸಾಮವೇದದಿಂದ ಅಭಿನಯವನ್ನು, ಅಥರ್ವಣ ವೇದದಿಂದ ರಸವನ್ನು ಆರಿಸಿಕೊಂಡು ನಾಟ್ಯ ಸೃಷ್ಟಿ ಮಾಡಿದನು. ಇದು ಪಂಚಮ ವೇದವಾಯಿತು. ಮೇಲು-ಕೀಳೆಂಬ ಭೇದವಿಲ್ಲದೆ ಎಲ್ಲರೂ ನೋಡಬಹುದಾದ ಮಾಧ್ಯಮವಾಯಿತು ಎಂಬ ತಿಳುವಳಿಕೆ ಬರುವಂತೆ ಭರತನು ವಿವರಗಳನ್ನು ನೀಡುವನು. ಒಟ್ಟಾರೆ ನಾಟಕದ ವಿಷಯದಲ್ಲಿ ಭಾರತೀಯರ ನಂಬುಗೆ ಪಾವಿತ್ರ್ಯತೆಯಿಂದ ಕೂಡಿದೆ. 'ಕಾವ್ಯೇಷು ನಾಟಕಂ ರಮ್ಯಂ' ಎಂದು ಹೇಳಿದ್ದಾರೆ.

ಗ್ರೀಕ್ ನಾಟಕ ಕ್ಷೇತ್ರದಿಂದ ಭಾರತೀಯ ಭಾಷೆಗಳವರೆಗೂ, ನಾಟಕ ಸಾಹಿತ್ಯದ ಕುರಿತು ಅವಲೋಕಿಸಲಾಗಿದೆ. ಭಾರತೀಯ ಭಾಷೆಗಳಲ್ಲಿ ರಂಗಭೂಮಿ ಮತ್ತು ನಾಟಕ ಸಾಹಿತ್ಯದ ದೃಷ್ಟಿಯಿಂದ ಭಾರತೀಯ ನಾಟಕ ಪರಂಪರೆಗೆ ಜಾನಪದವೇ ಆಧಾರವಾಗಿತ್ತೆಂದು ತಿಳಿದುಕೊಳ್ಳಬೇಕು. ಜಾನಪದದಲ್ಲಿರುವ ಯಕ್ಷಗಾನ, ಬಯಲಾಟ, ಸಣ್ಣಾಟ ಮುಂತಾದ ಜಾನಪದ ಪ್ರಕಾರಗಳು ರಂಗಭೂಮಿಗೆ ತಮ್ಮದೇ ಆದ ಕಸುವು ಕುದುರಿಸಿದವು.

ಲಲಿತ ಕಲೆಗಳಲ್ಲೊಂದು ನಾಟಕ ಕಲೆ. ಏಳು ಲಲಿತ ಕಲೆಗಳಲ್ಲಿ ದೃಶ್ಯ ಕಲೆ ಹಾಗೂ ಪ್ರದರ್ಶನ ಕಲೆಗಳೆಂದು ಭರತಮುನಿಯ ನಾಟ್ಯ ಶಾಸ್ತ್ರದಲ್ಲಿ ವಿಂಗಡಿಸಲಾಗಿದೆ. ಚಿತ್ರ, ಶಿಲ್ಪ, ವಾಸ್ತುಶಿಲ್ಪ ದೃಶ್ಯ

ಕಲೆಗಳಾದರೆ ಸಂಗೀತ, ನಾಟಕ, ನೃತ್ಯ, ಕಾವ್ಯವನ್ನು ಪ್ರದರ್ಶನ ಕಲೆಗಳೆಂದು ಗುರುತಿಸಿದ್ದಾರೆ. ದೃಶ್ಯ ಕಲೆಗಳಲ್ಲಿ ಸ್ಥಾಯಿಭಾವ ಸಂಚರಿಸುವದಿಲ್ಲ. ಸೌಂದರ್ಯ ರಸವನ್ನು ಮಾತ್ರ ಸೂಸುತ್ತದೆ. ಪ್ರದರ್ಶನ ಕಲೆಗಳು ಸ್ಥಾಯಿಭಾವಗಳು ವ್ಯಕ್ತಿಯ ನಟನೆ, ಸಂಗೀತ, ನೃತ್ಯ, ಕಾವ್ಯದ ರಸಭಾವಗಳು ಸಂಚರಿಸಿ ಮರೆಯಾಗುತ್ತವೆ.

ಆದ್ದರಿಂದ, ನಾಟಕ ಬದುಕಿನ ಬದ್ಧತೆ ಮತ್ತು ಪ್ರಬುದ್ಧತೆಯನ್ನು ಹೆಚ್ಚಿಸುತ್ತದೆ. ಅದರಂತೆ ಲಲಿತ ಕಲೆಗಳಲ್ಲಿ ಗುರು ಪರಂಪರೆ ಇನ್ನೂ ರೂಢಿಯಲ್ಲಿರುವದನ್ನು ಕಾಣುತ್ತೇವೆ. ಕಾಳಿದಾಸ ಭಟ್ಟನಾರಾಯಣ, ಭವಭೂತಿ, ಶೂದ್ರಕ ಮುಂತಾದವರ ಸಂಸ್ಕೃತ ನಾಟಕಗಳಲ್ಲಿ ಹಲವು ಪ್ರಸಿದ್ಧ ಕೃತಿಗಳು ಕನ್ನಡಕ್ಕೆ ಕಾಲಿರಿಸಿದವು. ಬೆಳ್ಳಾವೆ ನರಹರಿ, ಚುರುಮರಿ, ಶೇಷಗಿರಿರಾಯರು, ಬಸವಪ್ಪ ಶಾಸ್ತ್ರಿಗಳು ಮುಂತದವರು ಈ ಅನುವಾದದಲ್ಲಿ ತೊಡಗಿದ್ದರು. ಮಿತ್ರಾವಿಂದಗೋವಿಂದ ನಾಟಕ ಕನ್ನಡದ ಮೊದಲ ನಾಟಕವೆಂದು ಉಲ್ಲೇಖಿಸುತ್ತದೆ. ಆದರೆ, ಲಿಂಗಣ್ಣಯ್ಯನವರು ಕನ್ನಡದ ಶಾಂತಕವಿಯ ಸ್ವಾತಂತ್ರ ನಾಟಕ ಪ್ರಭು ನಾಟಕವೆಂದು ತಿಳಿಸುತ್ತಾರೆ.

ಕನ್ನಡ ರಂಭೂಮಿಯಲ್ಲಿ ಬಾಳಾಚಾರ್ಯ ಸಕ್ರಿ, ಶಾಂತಕವಿ, ವಾಮನ್‌ರಾವ್ ಮಾಸ್ತರ್, ಶ್ರೀನಿವಾಸರು, ಕೆ.ವಿ. ಸುಬ್ಬಣ್ಣ, ವೆಂಕಟಾಚಾರ್ಯ, ಎಣಿಗಿ ಬಾಳಪ್ಪ, ಶಿರಹಟ್ಟಿಯ ವೆಮಕೋಬರವ್, ಎಚ್. ಎನ್. ಹೂಗಾರ, ಗುಬ್ಬಿ ವೀರಣ್ಣ, ಡಾ. ಕಂಬಾರ, ಡಾ ಚಂಪಾ, ಜಿ.ಬಿ. ಜೋಷಿ, ಹುಲಶೇಖರ, ಚದುರಂಗ ಮುಂತಾದವರು ಇಂದಿನ ಆಧುನಿಕ ರಂಗ ಭೂಮಿಯ ಕಳಕಳಿಯಲ್ಲಿ ಕಾರ್ಯಪ್ರವೃತ್ತವಾಗಿದ್ದರು.

ನಾಟಕಕ್ಕೆ ನವ್ಯ ಸ್ಪರ್ಶ ನೀಡಿದ ಬಿ.ವಿ. ಕಾರಂತ, ಕೆ.ವಿ. ಸುಬ್ಬಣ್ಣರ ಸೃಜನಶೀಲತೆಯಲ್ಲಿ ಇನ್ನೂ ನಾಟಕಗಳು ಜೀವಂತ ಸಾಕ್ಷಿಯಾಗಿ ನಿಂತಿವೆ. ನಾಟಕ ಕಲೆಗೆ ಪುಟ್ಟರಾಜ ಗವಾಯಿಗಳ ಹಾಗೂ ಕಲಾ ಮಹರ್ಷಿ ಟಿ.ಪಿ ಅಕ್ಕಿ, ವ್ಹಿ.ಟಿ. ಕಾಳೆ ಮುಂತಾದವರ ಕೊಡುಗೆ ಹಿರಿದು. ಇಂತಹ ಕಲೆಗಳನ್ನು ಕನ್ನಡದ ಜ.ತೋಂಟದ ಸಿದ್ದಲಿಂಗ ಸ್ವಾಮಿಗಳು ಕಲಾವಿದರಿಗೆ ಸಹಕಾರ ಮತ್ತು ಪ್ರೋತ್ಸಾಹ ಕೊಟ್ಟು ಬೆಳೆಸಿದ್ದಾರೆ. ಮಕ್ಕಳ ರಂಗಭೂಮಿಯಲ್ಲಿ ನಿರತರಾದ ಡಾ. ನಿಂಗು ಸೊಲಗಿ, ಡಾ. ವಿನಾಯಕ ಕಮತದ, ವಿಜಯ ಲಲಿತ ಕಲಾ ಕಾಲೇಜಿನ ಪ್ರೊ. ಬಸವರಾಜ ನೆಲಜೇರಿ, ಮಕ್ಕಳ ರಂಗ ಪ್ರೋತ್ಸಾಹ ನೀಡುತ್ತಿರುವ ನಿ.ವಿ. ಸೇ.ಸಂ ಮುಂಡರಗಿ ಅಧ್ಯಕ್ಷರಾದ ನಿರ್ಮಲಾ ತರವಾಡೆ ನಿರತರಾಗಿದ್ದಾರೆ.

ನಮ್ಮ ನಾಟಕ ಕಲೆ ಉಳಿಯಬೇಕಾದರೆ ಯವಕರಲ್ಲಿ ಆಸಕ್ತಿಯನ್ನು ಬಿತ್ತಬೇಕು. ಪಠ್ಯದ ವಿಷಯವಾಗಬೇಕು. ಅಂದರೆ ನಾಟಕ ಕಲೆ ಮತ್ತು ಕಲಾವಿದರು ಬೆಳೆಯಲು ಸಾಧ್ಯ. ಮಕ್ಕಳ ಸರ್ವಾಂಗೀಣ ಪ್ರಗತಿಗೆ ಮತ್ತು ಸೃಜನಶೀಲ ಸಾಮರ್ಥ್ಯದ ವ್ಯಕ್ತಿತ್ವ ನಿರ್ಮಾಣ ಮಾಡುವಲ್ಲಿ



ಕಲೆಗಳು ಪ್ರೇರಕವಾಗುತ್ತವೆ. ನಾನು ಹಲವಾರು ನಾಟಕಗಳನ್ನು ನಿರ್ದೇಶಿಸಿದ್ದೇನೆ, ಹಲವಾರು ಕಾಲೇಜುಗಳ ವಿದ್ಯಾರ್ಥಿಗಳ ಮನೋಭಾವಗಳನ್ನು ಅರಿತಿದ್ದೇನೆ. ಅವರಲ್ಲಿರುವ ಸುಪ್ತ ಪ್ರತಿಭೆಗೆ ಪ್ರೋತ್ಸಾಹದ ಕೊರತೆ ಇದೆ. ಪಿಂಡಾರ ಕವಿ ಹೇಳುವ ಹಾಗೆ, ಪ್ರತಿಭಾವಂತನ ಆಸಕ್ತಿಗಿಂತಲೂ ಮನುಷ್ಯನ ಬೆಳವಣಿಗೆಗೆ ಪ್ರೋತ್ಸಾಹವೇ ಮುಖ್ಯವೆಂದು. ಆದ್ದರಿಂದ ಸರಕಾರ, ಕಲಾ ಪೋಷಕರು, ಪಾಲಕರು ಮನುಷ್ಯನಲ್ಲಿ ಬದುಕು ರೂಪಿಸುವ ನಾಟಕ ಕಲೆಗೆ ಪ್ರೋತ್ಸಾಹ ನೀಡಿ. ವಿಶ್ವ ರಂಗಭೂಮಿ ದಿನವಾದ ಇಂದು, ನಾಟಕ ಕಲೆಗಾಗಿ ದುಡಿದ, ಮಿಡಿದ, ಮಡಿದ ಮನಗಳಿಗೆ ಶರಣು ಶರಣಾರ್ಥಿ.

– ಪ್ರೊ. ಬಸವರಾಜ ನೆಲಜೇರಿ.
ಕವಿ, ಕಲಾವಿದ, ರಂಗ ನಿರ್ದೇಶಕರು-ಗದಗ.

ಹಾವೇರಿ ಲೋಕಸಭಾ ಕ್ಷೇತ್ರದ ಚುನಾವಣೆಗೆ ಸ್ಪರ್ಧೆ

■ ವಿಜಯಸಾಕ್ಷಿ ಸುದ್ದಿ, ಗದಗ

ಹಾವೇರಿ ಲೋಕಸಭಾ ಕ್ಷೇತ್ರದ ಚುನಾವಣೆಗೆ ರಾಷ್ಟ್ರೀಯ ಪಕ್ಷಗಳ ವಿರುದ್ಧ ಸ್ಪರ್ಧೆ ನೀಡಲಿದ್ದೇವೆ ಎಂದು ರಾಣಿ ಚೆನ್ನಮ್ಮ ಪಾರ್ಟಿಯ ಸಂಸ್ಥಾಪಕ ಎಂ.ಬಿ. ದೇಸಾಯಿ ತಿಳಿಸಿದ್ದಾರೆ. ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು, ನಮ್ಮೆಲ್ಲರ ಹೆಮ್ಮೆಯ ವೀರಶೈವ ಲಿಂಗಾಯತ ಸಮುದಾಯದಲ್ಲಿ ಜನಿಸಿದ ವೀರರಾಣಿ ಕಿತ್ತೂರ ಚೆನ್ನಮ್ಮ ಹೆಸರಿನಲ್ಲಿ ಸ್ಥಾಪಿತವಾದ ಪ್ರಾದೇಶಿಕ ರಾಣಿ ಚೆನ್ನಮ್ಮ ಪಾರ್ಟಿಯಿಂದ ದಿಟ್ಟ ಸಾಹಸದ ಪಂಚಮಸಾಲಿ ಸಮಾಜದ ಮಹಿಳೆ ಅಥವಾ ಪುರುಷರನ್ನು ಕಣಕ್ಕಿಳಿಸಲು ಮುಂದಾಗಿದೆ. ವೀರಶೈವ ಲಿಂಗಾಯತ ಪಂಚಮಸಾಲಿ ಸಮಾಜದ ಮತಗಳು ಎಷ್ಟು ಬೀಳಬಹುದು ಎಂದು ಸ್ಪರ್ಧೆ ಮಾಡಲು ಮುಂದಾಗಿದೆ. ಈಗಾಗಲೇ ಹಾವೇರಿ ಲೋಕಸಭಾ ಕ್ಷೇತ್ರದ ವೀರಶೈವ ಲಿಂಗಾಯತ ಪಂಚಮಸಾಲಿ ಸಮಾಜದ ಹಿರಿಯರು, ಹಿತೈಷಿಗಳು, ಮುಖಂಡರು ಹಾಗೂ ಸಂಘ ಸಂಸ್ಥೆಯವರು ಸಂಪರ್ಕಿಸಿ, ಸ್ಪರ್ಧಿಸುವಂತೆ ಸಲಹೆ ನೀಡಿದ್ದು, ಚುನಾವಣೆಗೆ ನಿಲ್ಲುವ ಆಕಾಂಕ್ಷಿಗಳಿಗೆ ರಾಣಿ ಚೆನ್ನಮ್ಮ ಪಾರ್ಟಿಯ ತತ್ವ ಸಿದ್ಧಾಂತಗಳೊಂದಿಗೆ ಬಿ.ಫಾರ್ಮ ಹಸ್ತಾಂತರಿಸಲಾಗುವುದು. ಹೆಚ್ಚಿನ ಮಾಹಿತಿಗಾ- 9980383723, 7483792645 ಸಂಪರ್ಕಿಸಬಹುದು ಎಂದು ಅವರು ತಿಳಿಸಿದ್ದಾರೆ.

ಶ್ರೀ ರಂಭಾಪುರಿ ಪೀಠದಲ್ಲಿ ಯುಗಮಾನೋತ್ಸವಕ್ಕೆ ತೆರೆ

■ ವಿಜಯಸಾಕ್ಷಿ ಸುದ್ದಿ, ಬಾಳೆಹೊನ್ನೂರು

ಶ್ರೀ ಜಗದ್ಗುರು ರಂಭಾಪುರಿ ವೀರಸಿಂಹಾಸನ ಮಹಾ ಸಂಸ್ಥಾನ ಪೀಠದಲ್ಲಿ ಮಾರ್ಚ್ 20ರಿಂದ ನಡೆದುಕೊಂಡು ಬಂದ ಶ್ರೀ ಜಗದ್ಗುರು ರೇಣುಕಾಚಾರ್ಯ ಜಯಂತಿ ಯುಗಮಾನೋತ್ಸವ ಹಾಗೂ ಕ್ಷೇತ್ರನಾಥ ಶ್ರೀ ವೀರಭದ್ರಸ್ವಾಮಿ ಮಹಾರಥೋತ್ಸವದ ಅಂಗವಾಗಿ ಜರುಗಿದ ಎಲ್ಲಾ ಕಾರ್ಯಕ್ರಮಗಳು ಭದ್ರಾ ನದಿ ತೀರದಲ್ಲಿ ಸುರಗಿ ಸಮಾರಾಧನಾ ಪೂಜೆಯೊಂದಿಗೆ ಜಯಂತಿ ಜಾತ್ರಾ ಮಹೋತ್ಸವ ಸಂಪನ್ನಗೊಂಡಿತು.

ಇದೇ ಸಂದರ್ಭದಲ್ಲಿ ಇಷ್ಟಲಿಂಗ ಮಹಾಪೂಜಾ ನೆರವೇರಿಸಿದ ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ಆಶೀರ್ವಚನ ನೀಡಿ, ಮನುಷ್ಯನ ಬುದ್ಧಿ ಶಕ್ತಿ ಬೆಳೆದಂತೆ ಭಾವನೆಗಳು ಬೆಳೆದುಕೊಂಡು ಬರಬೇಕಾಗಿದೆ. ಮಾನವೀಯ ಸಂಬಂಧಗಳು ಗಟ್ಟಿಗೊಳ್ಳಬೇಕಾಗಿದೆ. ಶಿಕ್ಷಣದಿಂದ ಬುದ್ಧಿ ಶಕ್ತಿ ಬೆಳೆದರೆ, ಧರ್ಮಾಚರಣೆಯಿಂದ ಭಾವನೆಗಳು ಬೆಳೆಯಲು ಸಾಧ್ಯ. ಬದುಕಿ ಬಾಳುವ ಮನುಷ್ಯನಿಗೆ ಬುದ್ಧಿ-ಭಾವನೆಗಳೆರಡೂ ಬೇಕು. ಜ್ಞಾನ ಕ್ರಿಯಾತ್ಮಕ ಬದುಕಿನೊಂದಿಗೆ ಸಾಮಾಜಿಕ ಮೌಲ್ಯಗಳನ್ನು ಎತ್ತಿ ಹಿಡಿದ ಶ್ರೀ ಜಗದ್ಗುರು ರೇಣುಕಾಚಾರ್ಯರ ಲೋಕೋದ್ಧಾರ ಚಿಂತನೆಗಳನ್ನು ಅರಿತು ಬಾಳಿದರೆ ಜೀವನ ಸಾರ್ಥಕಗೊಳ್ಳುವುದು.

ಈ ಅಪೂರ್ವ ಸುರಗಿ ಪೂಜಾರಾಧನಾ ಸಂದರ್ಭದಲ್ಲಿ ಎಡೆಯೂರು, ಮುಕ್ತಿಮಂದಿರ, ಸುಳ್ಳ, ಮಳಲಿಮಠ, ಕವಲೇದುರ್ಗ, ಮೈಸೂರು, ಸಂಗೊಳ್ಳಿ, ಸಿದ್ಧರಬೆಟ್ಟ, ಹಾರನಹಳ್ಳಿ ಶ್ರೀಗಳು ಮೊದಲ್ಗೊಂಡು ಸುಮಾರು 20ಕ್ಕೂ ಮಿಕ್ಕಿ ಮಠಾಧೀಶರು ಪಾಲ್ಗೊಂಡರು. ಆಗಮಿಸಿದ ಸಹಸ್ರಾರು ಭಕ್ತರು ಭದ್ರಾ ನದಿಯಲ್ಲಿ ಮಂಗಳ ಸ್ನಾನ ಮಾಡಿ ಇಷ್ಟಲಿಂಗಾರ್ಚನೆ ಪೂಜಾ ನೆರವೇರಿಸಿದರು.

ಸೂಕ್ತ ದಾಖಲೆಯಿಲ್ಲದ 1,536 ಸೀರೆ ಜಪ್ತಿ

■ ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ಮಾ.25ರ ರಾತ್ರಿ 1 ಗಂಟೆ ಸುಮಾರಿಗೆ ಅನುಮಾನಾಸ್ಪದವಾಗಿ ಸಂಚರಿಸುತ್ತಿದ್ದ ಮಿನಿ ಟ್ರಕ್ ಅನ್ನು ಅಣ್ಣಿಗೇರಿ ರಸ್ತೆಯ ಕೊಂಡಿಕೊಪ್ಪ ಚೆಕ್‌ಪೋಸ್ಟ್‌ನಲ್ಲಿ ಎಸ್‌ಎಸ್‌ಟಿ ಅಧಿಕಾರಿಗಳ ತಂಡ ತಡೆದು ಪರಿಶೀಲಿಸಿದಾಗ, ಅದರಲ್ಲಿ ದಾಖಲೆ ಇಲ್ಲದ ರೂ. 15,36,000 ಮೌಲ್ಯದ ಸೀರೆಗಳು ದೊರೆತಿದ್ದು, ಸೀರೆ ಹಾಗೂ ಮಿನಿ ಟ್ರಕ್ ಜಪ್ತಿ ಮಾಡಿ ಅಣ್ಣಿಗೇರಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಲಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿಗಳು ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ಕೊಂಡಿಕೊಪ್ಪ ಚೆಕ್‌ಪೋಸ್ಟ್‌ನಲ್ಲಿ ತಪಾಸಣೆ ನಡೆಸಿದ ಸಂದರ್ಭದಲ್ಲಿ ಸೂಕ್ತ ದಾಖಲೆ ಇಲ್ಲದ 1,536 ಸೀರೆಗಳಿರುವ 25 ಗಂಟುಗಳು ಪತ್ತೆ ಆಗಿವೆ. ಇವುಗಳ ಮೌಲ್ಯ ರೂ. 15,36,000 ಆಗಿದೆ. ಸೀರೆ ಮತ್ತು ಮಿನಿ ಟ್ರಕ್ ವಶಕ್ಕೆ ಪಡೆದು, ಸೀಜ್ ಮಾಡಿ, ಅಣ್ಣಿಗೇರಿ ಪೊಲೀಸ್ ಠಾಣೆಯಲ್ಲಿ ನಿಲ್ಲಿಸಲಾಗಿದೆ.

ಮ್ಯಾಜಿಸ್ಟ್ರೇಟ್ ಕೆ.ಎಸ್. ಪಾಟೀಲ ನೇತೃತ್ವದ ಎಸ್‌ಎಫ್‌ಸಿ ತಂಡ ಈ ಕಾರ್ಯ ಮಾಡಿದ್ದು, ಎಂಸಿಸಿ ನೊಡೆಲ್ ಅಧಿಕಾರಿ ಮೋನಾ ರಾವುತ್ ಹಾಗೂ ತಹಸೀಲ್ದಾರ ರಾಜು ಮಾವರಕರ ಮಾರ್ಗದರ್ಶನ ಮಾಡಿದ್ದಾರೆ ಎಂದು ಅವರು ತಿಳಿಸಿದ್ದಾರೆ.

ಲಕ್ಷ್ಮೇಶ್ವರದಲ್ಲಿ ರಂಗಪಂಚಮಿ ಗೊಂದಲ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ತಾಲೂಕಿನ ಗೊಜನೂರ, ಪು.ಬಡ್ನಿ, ಸೂರಣಗಿ ಮತ್ತು ಸೋಗಿವಾಳ ಗ್ರಾಮದಲ್ಲಿ ಮಂಗಳವಾರ ರಂಗಿನೋಕುಳಿ ಹಬ್ಬ ಆಚರಿಸಲಾಯಿತು. ಗೊಜನೂರ ಗ್ರಾಮದಲ್ಲಿ ಎತ್ತಿನ ಬಂಡಿಯಲ್ಲಿ ಕಾಮರತಿ ಮೂರ್ತಿ ಮೆರವಣಿಗೆಯನ್ನು ಹಲಗೆ ಬಡಿಯುವ ಮೂಲಕ ವಿಜೃಂಭಣೆಯಿಂದ ಆಚರಿಸಲಾಯಿತು. ಸುಡು ಬಿಸಿಲನ್ನೂ ಲೆಕ್ಕಿಸದೇ ಚಿಣ್ಣರು ಬಣ್ಣದಾಟದಲ್ಲಿ ಮಿಂದೆದ್ದರು.

ಲಕ್ಷ್ಮೇಶ್ವರದಲ್ಲಿ ಪುರಸಭೆ ಮುಖ್ಯಾಧಿಕಾರಿ ಪ್ರಕಟಣೆ ನೀಡಿದ್ದರು. ಆದರೆ ಪಟ್ಟಣದಲ್ಲಿ ಕಾಮರತಿ ಮೂರ್ತಿ ಪ್ರತಿಷ್ಠಾಪನೆಯ ಸಂಘಟಕರು, ಯುವಕರು, ಹಿರಿಯರು ಶುಕ್ರವಾರವೇ ರಂಗಪಂಚಮಿ ಆಚಣೆಯಾಗಬೇಕು, ಸೋಮವಾರ ಪಟ್ಟಣದಲ್ಲಿ ಕಾಮರತಿ ಮೂರ್ತಿ ಪ್ರತಿಷ್ಠಾಪನೆ ಮಾಡಲಾಗಿದ್ದು, ಶುಕ್ರವಾರ 5ನೇ ದಿನ ರಂಗಪಂಚಮಿ ಆಚರಿಸಲೇಬೇಕು

ಎಂದು ಅಭಿಪ್ರಾಯ ವ್ಯಕ್ತಪಡಿಸಿದ ಹಿನ್ನೆಲೆಯಲ್ಲಿ ಮುಖ್ಯಾಧಿಕಾರಿಗಳ ಪ್ರಕಟಣೆಗೆ ವಿರೋಧ ವ್ಯಕ್ತವಾಗಿದೆ.

ಈ ಬಗ್ಗೆ ಪ್ರತಿಕ್ರಿಯೆ ನೀಡಿದ ಮುಖ್ಯಾಧಿಕಾರಿ ಮಹೇಶ ಹಡಪದ, ಶುಕ್ರವಾರ ವಾರದ ಸಂತೆ ಇರುವುದರಿಂದ ಗ್ರಾಮೀಣ ಜನರಿಗೆ, ವ್ಯಾಪಾರ-ವಹಿವಾಟಿಗೆ ತೊಂದರೆಯಾಗಬಾರದೆಂಬ ಸದುದ್ದೇಶದಿಂದ ಪ್ರಮುಖರೊಂದಿಗೆ ಚರ್ಚಿಸಿ ಶನಿವಾರ ಆಚರಣೆ ಮಾಡುವುದಾಗಿ ತಿಳಿಸಲಾಗಿತ್ತು. ಶುಕ್ರವಾರವೇ ರಂಗಪಂಚಮಿ ಆಚರಿಸುವ ಬಗ್ಗೆ ತಹಸೀಲ್ದಾರ, ಪೊಲೀಸ್ ಮತ್ತು ಪಟ್ಟಣದ ಹಿರಿಯರು, ಜನಪ್ರತಿನಿದಿಗಳು, ಸಂಘಟಕರೊಂದಿಗೆ ಚರ್ಚಿಸಿ ಸೂಕ್ತ ಒಮ್ಮತದ ನಿರ್ಧಾರ ಕೈಗೊಳ್ಳಲಾಗುವುದು

ಕಾಮರತಿ ಉತ್ಸವದ ಅಂಗವಾಗಿ ಸಾಂಸ್ಕೃತಿಕ ಕಾರ್ಯಕ್ರಮ ಇಂದು

■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಹಾಳದಿಬ್ಬ ಓಣಿಯಲ್ಲಿ ವಿವಿಧೋದ್ದೇಶಗಳ ಸೇವಾ ಸಂಸ್ಥೆ, ಕಾಮರತಿ ಉತ್ಸವ ಸಮಿತಿ ವತಿಯಿಂದ ಕಾಮರತಿ ಉತ್ಸವದ ನಿಮಿತ್ತ ಸಾಂಸ್ಕೃತಿಕ ಕಾರ್ಯಕ್ರಮವನ್ನು ಮಾ.27ರಂದು ಸಂಜೆ 6ಕ್ಕೆ ಹಮ್ಮಿಕೊಳ್ಳಲಾಗಿದೆ.

ಉದ್ಯಮಿಗಳಾದ ಕಾಶೀನಾಥಸಾ ಹಬೀಬ, ಅಶೋಕ ಸಂಕಣ್ಣವರ ಕಾರ್ಯಕ್ರಮ ಉದ್ಘಾಟಿಸುವರು. ಕಾಮರತಿ ಉತ್ಸವ ಸಮಿತಿ ಅಧ್ಯಕ್ಷ ಅಶೋಕ ಮಂದಾಲಿ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ನಿವೃತ್ತ ಪ್ರಾಚಾರ್ಯ ಅನಿಲ ವೈದ್ಯ, ಜಾನಪದ ಕಲಾವಿದ ಗವಿಸಿದ್ದಯ್ಯ ಹಳ್ಳಿಕೇರಿಮಠ, ಮೂರ್ತಿ ತಯಾರಕ ಮಾನಪ್ಪ ಕಮ್ಮಾರ, ನಗರಸಭೆ ಸದಸ್ಯರಾದ ಮಹಾಂತೇಶ ನಲವಡಿ, ವಿನಾಯಕ ಮಾನ್ವಿ ಸೇರಿ ಹಲವರು ಪಾಲ್ಗೊಳ್ಳುವರು ಎಂದು ಸಮಿತಿ ಗೌರವಾಧ್ಯಕ್ಷ ರುದ್ರಪ್ಪ ಕಲ್ಬಂಡಿ, ಉಪಾಧ್ಯಕ್ಷ ಯಲ್ಲನಗೌಡ ದೇಸಾಯಿ ಹಾಗೂ ಕಾರ್ಯದರ್ಶಿ ಉಪೇಂದ್ರ ಹುಯಿಲಗೋಳ ತಿಳಿಸಿದ್ದಾರೆ.

ಬಿಜೆಪಿ ಪ್ರಭಾರಿ ಸಂಚಾಲಕರ ನೇಮಕ

■ ವಿಜಯಸಾಕ್ಷಿ ಸುದ್ದಿ, ಗದಗ

ಭಾರತೀಯ ಜನತಾ ಪಾರ್ಟಿ ಗದಗ ಜಿಲ್ಲಾ ವತಿಯಿಂದ ಹಾವೇರಿ-ಗದಗ ಲೋಕಸಭಾ ಕ್ಷೇತ್ರ ಗದಗ ವಿಧಾನಸಭಾ ಕ್ಷೇತ್ರದ ಪ್ರಭಾರಿಯನ್ನಾಗಿ ನಾಗರಾಜ ಕುಲಕರ್ಣಿ, ಸಂಚಾಲಕರಾಗಿ ಎಂ.ಎಂ. ಹಿರೇಮಠ, ಶಿರಹಟ್ಟಿ ಪ್ರಭಾರಿಯನ್ನಾಗಿ ಬಿ.ಎಸ್. ಚಿಂಚಲಿ, ಸಂಚಾಲಕರಾಗಿ ಬಿ.ಡಿ. ಪಲ್ಲೇದ, ರೋಣ ಪ್ರಭಾರಿಯನ್ನಾಗಿ ಸಿದ್ದು ಪಲ್ಲೇದ, ಸಂಚಾಲಕರಾಗಿ ಶಿವಾನಂದ ಮಠದ ಇವರುಗಳನ್ನು ಬಿಜೆಪಿ ಗದಗ ಜಿಲ್ಲಾಧ್ಯಕ್ಷ ತೋಟಪ್ಪ(ರಾಜು) ಕುರಡಗಿ ನೇಮಕ ಮಾಡಿ ಆದೇಶ ಹೊರಡಿಸಿದ್ದಾರೆ.

ಗುಡ್ಡಾಪುರ ದಾನಮ್ಮದೇವಿ ಪುರಾಣ ಪ್ರವಚನ ಪ್ರಾರಂಭೋತ್ಸವಕ್ಕೆ ಚಾಲನೆ

ಶರಣರ ಬದುಕು ಜೀವಜಲವಾಗಲಿ

■ ವಿಜಯಸಾಕ್ಷಿ ಸುದ್ದಿ, ಗದಗ

ಮಂದಿರ, ಮಸೀದಿ, ಚರ್ಚ್‌ಗಳನ್ನು ಕಟ್ಟಿದರೆ ನಾಳೆ ಅವು ಬೀಳುತ್ತವೆ. ಬಿದ್ದ ಮೇಲೆ ಅವುಗಳನ್ನು ಮೊದಲಿಗಿಂತ ಚೆನ್ನಾಗಿ ಮರು ನಿರ್ಮಿಸಬಹುದು. ಆದರೆ, ಮಾನವನಲ್ಲಿರುವ ಮಾನವೀಯತೆಯ ಮಂದಿರ ಬಿದ್ದರೆ ಅದನ್ನು ಮತ್ತೆ ಕಟ್ಟಲು ಸಾಧ್ಯವಿಲ್ಲ ಎಂದು ಓಂಕಾರೇಶ್ವರ ಶ್ರೀಮಠದ ಪೂಜ್ಯಶ್ರೀ ಫಕ್ಕೀರೇಶ್ವರ ಶಿವಾಚಾರ್ಯರ ಮಹಾಸ್ವಾಮೀಜಿ ಹೇಳಿದರು.

ಅವರು ಗದಗ ತಾಲೂಕಿನ ಕಳಸಾಪುರ ಗ್ರಾಮದ ಈಶ್ವರ ದೇವರ ಹಾಗೂ ಬಸವಣ್ಣ ದೇವರ ಜಾತ್ರಾ ಮಹೋತ್ಸವದ ಅಂಗವಾಗಿ ಶಿವಶರಣೆ ಗುಡ್ಡಾಪುರ ದಾನಮ್ಮದೇವಿ ಪುರಾಣ ಪ್ರವಚನ ಪ್ರಾರಂಭೋತ್ಸವಕ್ಕೆ ಚಾಲನೆ ನೀಡಿ ಮಾತನಾಡಿದರು.

ಮಾನವೀಯತೆ ಅನ್ನುವ ಮಂದಿರವೇ ಶ್ರೇಷ್ಠ ಮಂದಿರವಾಗಬೇಕು. ಜಾತಿಯಿಂದ ದೂರ ಇದ್ದು ನೀತಿಯಿಂದ ಬಾಳಬೇಕು. ಅಂತೆಯೇ ಶರಣ-ಶರಣೆಯರು ಹಾಗೆಯೇ ಬದುಕಿದರು. ಅಂತವರ ಜೀವನ, ಅವರ ಬದುಕು ನಮ್ಮ ಜೀವನಕ್ಕೆ ಜೀವಜಲವಾದಾಗ ಅಂತರಂಗದ

ದೀಪ ಬೆಳಗುತ್ತದೆ. ದಾನಮ್ಮ ದೇವಿಯ ಜೀವನ ದರ್ಶನ ಪ್ರವಚನ ಕೇಳಿ ಎಲ್ಲರೂ ಕೂಡ ಶರಣರಾಗಲು ಸಾಧ್ಯವೆಂದು ಹೇಳಿದರು.

ಪ್ರವಚನಕಾರ ಶಿವಲಿಂಗಯ್ಯಶಾಸ್ತ್ರಿ ಸಿದ್ದಾಪುರವರು ಮಾತನಾಡಿ, ಗುಡ್ಡಾಪುರದ ದಾನಮ್ಮ ದೇವಿಯ ಪ್ರವಚನದಲ್ಲಿ ಮನುಷ್ಯ ಜೀವನದಲ್ಲಿ ಬದುಕಿಗೆ ಬೆಳಕಾಗುವಂತಹ ಎರಡು ಒಳ್ಳೆಯ ಮಾತನ್ನು ಕೇಳಬೇಕು. ರಾಮಕೃಷ್ಣ ಪರಮಹಂಸರ ಸಂಘದಿಂದ, ಅವರ ಒಳ್ಳೆಯ ಮಾತಿನಿಂದ ನರೇಂದ್ರಸ್ವಾಮಿ ವಿವೇಕಾನಂದರಾದರು. ಅಂತೆಯೇ ಗುರುಗೋವಿಂದರ ಮಾತಿನಿಂದ ಷರೀಫ್ ಸಾಹೇಬರು ಶಿವಯೋಗಿಯಾದರು. ಹಾನಗಲ್ ಕುಮಾರ ಶಿವಯೋಗಿಯವರ ಮಾತಿನಿಂದ ಪಂ.ಪಂಚಾಕ್ಷರಿ ಗವಾಯಿಗಳು ಪ್ರಪಂಚದ ಅಂಧ-ಅನಾಥ, ದೀನ-ದಲಿತರ ಮಕ್ಕಳಿಗೆ ಸಂಗೀತ ವಿದ್ಯೆಯನ್ನು ಧಾರೆ ಎರೆದು ಅವರ ಬಾಳ ಬೆಳಗಿ ಸಂಗೀತ ಲೋಕದ ಋಷಿಯಾದರು.

> ದಾನಮ್ಮನ ಬದುಕಿನ ಧ್ಯಾನದ ಬೆಳಕು ನಮ್ಮೆಲ್ಲರ ಹೃದಯಗಳನ್ನು ಬೆಳಗುವಂತಾಗಲಿ. ನಿತ್ಯ ನಡೆಯುವ ಪ್ರವಚನ ಕೇಳಿ ನಮ್ಮ ಮನಸ್ಸಿನ ಪಾಪಗಳು ಸುಟ್ಟು ಹೋಗುತ್ತವೆ. ಅಕ್ಕಮಹಾದೇವಿ ಒಳ್ಳೆಯ ಮಾತುಗಳು ಹೇಳುವಂತವರ ಸಂಗವನ್ನೇ ಕರುಣಿಸು ಚೆನ್ನಮಲ್ಲಿಕಾರ್ಜುನ ಎಂದು ಪ್ರಾರ್ಥನೆ ಮಾಡಿದ್ದಾಳೆ. ಅಕ್ಕಮಹಾದೇವಿಯಂತೆ ನಮ್ಮೆಲ್ಲರ ಜೀವನ ಆಗಲಿ ಎಂದು ಪ್ರವಚನಕಾರ ಶಿವಲಿಂಗಯ್ಯಶಾಸ್ತ್ರಿ ಸಿದ್ದಾಪುರ ಆಶಯ ವ್ಯಕ್ತಪಡಿಸಿದರು.

ಹಾಗೆ ದಾನಮ್ಮದೇವಿ, ಗುರು ಶಾಂತವೀರ ಮಹಾಸ್ವಾಮಿಗಳ ಸೇವೆ ಮಾಡಿ ಅವರ ಎರಡು ಮಾತಿನಿಂದ ಶರಣೆ ಆದರು ಎಂದರು.

ಕಲಬುರಗಿಯ ಸಂಗಮೇಶ್ವರ ಗವಾಯಿ ಪಾಟೀಲ ಅವರಿಂದ ಸಂಗೀತ ಸೇವೆ ಜರುಗಿತು. ತೋಂಟದಾರ್ಯ ಕರಡಿಕಲ್ ತಬಲಾ ಸಾಥ್ ನೀಡಿದರು. ವೇದಿಕೆ ಮೇಲೆ ಗ್ರಾ.ಪಂ ಅಧ್ಯಕ್ಷ, ಉಪಾಧ್ಯಕ್ಷ ಹಾಗೂ ಸರ್ವ ಸದಸ್ಯರು, ಗುರು-ಹಿರಿಯರು ಉಪಸ್ಥಿತರಿದ್ದರು.

ಕನ್ನಡ ವಿಧೇಯಕ ಕಟ್ಟುನಿಟ್ಟಾಗಿ ಜಾರಿಗೊಳಿಸಿ

■ ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ಸರ್ಕಾರವು ಕನ್ನಡ ಭಾಷಾ ಸಮಗ್ರ ಅಭಿವೃದ್ಧಿ ಅಧಿನಿಯಮ ಜಾರಿಗೊಳಿಸಿ ಎಲ್ಲಾ ವರ್ತಕರು ತಮ್ಮ ತಮ್ಮ ಅಂಗಡಿ ಮುಂಗಟ್ಟು, ವಾಣಿಜ್ಯ ಮಳಿಗೆಗಳ ನಾಮಫಲಕಗಳಲ್ಲಿ ಕಡ್ಡಾಯವಾಗಿ ಶೇ. 60ರಷ್ಟು ಕನ್ನಡವನ್ನು ಬಳಸಬೇಕು ಎಂದು ವಿಧೇಯಕವನ್ನು ಜಾರಿಗೊಳಿಸಿದೆ. ಗದಗ ತಾಲೂಕಿನಲ್ಲಿ ಸದರಿ ವಿಧೇಯಕ ಕಟ್ಟುನಿಟ್ಟಾಗಿ ಜಾರಿಗೊಳಿಸುವಂತೆ ಕರ್ನಾಟಕ ರಕ್ಷಣಾ ವೇದಿಕೆ ಗದಗ ತಾಲೂಕು ಘಟಕದ ವತಿಯಿಂದ ಗದಗ ತಹಸೀಲ್ದಾರರವರಿಗೆ ಮನವಿ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಗದಗ ತಾಲೂಕು ಘಟಕದ ಅಧ್ಯಕ್ಷ ದಾವಲಸಾಬ ಎಂ.ತಹಸೀಲ್ದಾರ, ಪ್ರಧಾನ ಕಾರ್ಯದರ್ಶಿ ಮಹಾಂತೇಶ ನಡಗೇರಿ, ಜಿಲ್ಲಾ ಉಪಾಧ್ಯಕ್ಷ ಬಸವರಾಜ ಮೇಟಿ, ಮುಖಂಡರಾದ ವಿನಾಯಕ ಬದಿ, ತೌಸಿಫ ಢಾಲಾಯತ, ಹುಸೇನ ಅಕ್ಕಿ, ಸಲೀಮ ಶಿರವಾರ, ಇಸಾಕ ನದಾಫ, ಮುಬಾರಕ ಮುಲ್ಲಾ, ಆಝಾದ ನಾಗನೂರ, ಯಲ್ಲೇಶ ಬಳ್ಳಾರಿ, ಸದ್ದಾಂ ಹುಸೇನ ತಹಸೀಲ್ದಾರ, ಶಬ್ಬೀರ ಹಂಜಗಿ, ಗೌಸುಸಾಬ ಶಿರಹಟ್ಟಿ, ರವಿ ಮಲ್ಲಾಡ, ಇಮ್ರಾನ್ ಮುಂತಾದವರು ಉಪಸ್ಥಿತರಿದ್ದರು.

ಸಂಭ್ರಮದ ಹೋಳಿ ಆಚರಣೆ

■ ವಿಜಯಸಾಕ್ಷಿ ಸುದ್ದಿ, ಮುಳಗುಂದ

ಪಟ್ಟಣದಲ್ಲಿ ಸೋಮವಾರ ಕಾಮಣ್ಣ ಹಾಗೂ ರತಿದೇವಿಯ ಮೂರ್ತಿಗಳನ್ನು ವಿಶೇಷ ಪೂಜಾ ಕೈಂಕರ್ಯ ನಂತರ ಮಂಗಳವಾರ ಬೆಳಗಿನ ಜಾವ 5 ಗಂಟೆಗೆ ಕಾಮ ದಹನದ ಜರುಗಿತು.

ಪಟ್ಟಣದ ನಾಗರಿಕರು ಬೆಳಿಗ್ಗೆಯಿಂದ ಬಣ್ಣದಾಟದಲ್ಲಿ ತೊಡಗಿದ್ದರು.

ಮಹಿಳೆಯರು, ಹಿರಿಯ ನಾಗರಿಕರು ತಮ್ಮ ತಮ್ಮ ಓಣಿಯಲ್ಲಿ ಒಬ್ಬರಿಗೊಬ್ಬರು ಬಣ್ಣ ಹಚ್ಚುವ ಮೂಲಕ ಹೋಳಿ ಹಬ್ಬವನ್ನು ಸಂಭ್ರಮ-ಸಡಗರದಿಂದ ಆಚರಿಸಿದರು.

ಪಟ್ಟಣದ ಚಿಂದಿಪೇಟಿ ಓಣಿಯಲ್ಲಿ ವಾಹನದಲ್ಲಿ ಕಾಮನ ಪ್ರತಿಕೃತಿ ನಿರ್ಮಿಸಿ, ಪಟ್ಟಣದ ಪ್ರಮುಖ ಬೀದಿಗಳಲ್ಲಿ ರಗ್ಗಹಲಗಿ ಬಾರಿಸುತ್ತಾ ಪರಸ್ಪರ ಬಣ್ಣವನ್ನು ಹಚ್ಚುತ್ತಾ, ಮೇರವಣಿಗೆ ಉದ್ದಕ್ಕೂ ಮಕ್ಕಳು ರಗ್ಗಹಲಗಿ ನಾದಕ್ಕೆ ಹೆಜ್ಜೆ ಹಾಕಿದರು.

ಈಶ್ವರೀಯ ವಿಶ್ವವಿದ್ಯಾಲಯದಲ್ಲಿ ಬೇಸಿಗೆ ಶಿಬಿರ

■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಇಲ್ಲಿನ ಈಶ್ವರೀಯ ವಿಶ್ವವಿದ್ಯಾಲಯದಲ್ಲಿ 12ರಿಂದ 16 ವರ್ಷದೊಳಗಿನ ಮಕ್ಕಳಿಗೆ ಸರ್ವತೋಮುಖ ವ್ಯಕ್ತಿತ್ವ ವಿಕಸನ ಶಿಬಿರವು ಮಾರ್ಚ್ 30ರಿಂದ ಏಪ್ರಿಲ್ 8ರವರೆಗೆ ನಡೆಯಲಿದೆ ಎಂದು ಸಂಚಾಲಕಿ ಬ್ರ.ಕು. ಸವಿತಕ್ಕನವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಪ್ರತಿ ದಿನ ಬೆಳಿಗ್ಗೆ 10ರಿಂದ 1 ಗಂಟೆಯವರೆಗೆ ಶಿಬಿರ ನಡೆಯಲಿದ್ದು, ನರೇಗಲ್ಲ ಪಟ್ಟಣ ಮತ್ತು ಸುತ್ತಮುತ್ತಲಿನ ಎಲ್ಲ ಗ್ರಾಮಗಳ ಮಕ್ಕಳು ಈ ಶಿಬಿರದ ಸದುಪಯೋಗವನ್ನು ಪಡೆದುಕೊಳ್ಳಲು ಅವರು ತಿಳಿಸಿದ್ದಾರೆ.

ಶಿಬಿರವು ಸಂವಾದಾತ್ಮಕ ತರಗತಿಗಳು ಮತ್ತು ರಚನಾತ್ಮಕ ಕಾರ್ಯಾಗಾರವನ್ನು ಹೊಂದಿದ್ದು, ಅನೇಕ ಸಂಪನ್ಮೂಲ ವ್ಯಕ್ತಿಗಳು ಇದರಲ್ಲಿ ಪಾಲ್ಗೊಳ್ಳಲಿದ್ದಾರೆ. ಪ್ರವೇಶ ಉಚಿತವಾಗಿದ್ದು, ನೋಂದಣಿ ಕಡ್ಡಾಯವಾಗಿರುತ್ತದೆ. ಈ ಶಿಬಿರದಲ್ಲಿ ನೈತಿಕ ಶಿಕ್ಷಣ ಮತ್ತು ಮೌಲ್ಯ ಶಿಕ್ಷಣ, ವರ್ತನೆಯ ಪರಿವರ್ತನೆ, ಆಧ್ಯಾತ್ಮ ಲೋಕದ ಅದ್ಭುತ ರಹಸ್ಯ, ಆರೋಗ್ಯ ಜ್ಞಾನ, ಶ್ಲೋಕ, ವಚನ, ಜ್ಞಾನಯುಕ್ತ ಗೀತೆಗಳ ಪಠಣ, ರಾಜಯೋಗ, ಮೆಡಿಟೇಶನ್, ಯೋಗಾಸನ, ಪ್ರಾಣಾಯಾಮ, ಒಳ್ಳೆಯ ನಡೆತೆಗಳು, ಕ್ರಾಫ್ಟ್, ಚಿತ್ರಕಲೆ ಮತ್ತು ಸ್ಮರಣ ಶಕ್ತಿ ಹೆಚ್ಚಿಸುವಿಕೆ ಹೀಗೆ ಅನೇಕ ವಿಭಾಗಗಳನ್ನು ಹೊಂದಿದ್ದು ಮಕ್ಕಳಿಗೆ ಭವಿಷ್ಯದಲ್ಲಿ ತಮ್ಮ ಜೀವನವನ್ನು ಭದ್ರವಾಗಿ ಕಟ್ಟಿಕೊಳ್ಳುವ ನೆಲೆಗಟ್ಟನ್ನು ಒದಗಿಸುವ ವಿಷಯಗಳನ್ನು ಒಳಗೊಂಡಿದೆ.

ಪಾಲಕರು ತಮ್ಮ ಮಕ್ಕಳನ್ನು ಈ ಶಿಬಿರಕ್ಕೆ ದಾಖಲಿಸಬೇಕೆಂದು ಸಂಚಾಲಕಿ ಸವಿತಕ್ಕ ಕೋರಿದ್ದಾರೆ.

ನಿಧನ ವಾರ್ತೆ

ಫಕ್ಕೀರಸಾಬ ಕಲ್ಮನಿ

ಗದಗ: ನಗರದ ನ್ಯೂ ಡಿಜಿಟಲ್ ವರ್ಲ್ಡ್‌ನ ಮಾಲೀಕರಾದ ಮುನ್ನಾ ಕಲ್ಮನಿ ಅವರ ತಂದೆ ಪಕ್ಕೀರಸಾಬ ಕಲ್ಮನಿ (76) ಮಂಗಳವಾರ ನಿಧನರಾದರು. ಮೃತರು ಪತ್ನಿ, ಪುತ್ರ, ನಾಲ್ವರು ಪುತ್ರಿಯರು ಸೇರಿದಂತೆ ಅಪಾರ ಬಳಗವನ್ನು ಅಗಲಿದ್ದಾರೆ. ಮೃತರ ಅಂತಿಮ ಯಾತ್ರೆ ಬುಧವಾರ ಬೆಳಿಗ್ಗೆ 9.30 ಗಂಟೆಗೆ ನರಸಾಪೂರದ ರಂಗಪ್ಪಜ್ಜನ ಮಠದ ಹತ್ತಿರುವ ಸ್ವಗೃಹದಿಂದ ಹೊರಡಲಿದೆ.

ಪುಲಿಗೆರೆ ಪೌರ್ಣಿಮೆ ಸರಣಿ ಕಾರ್ಯಕ್ರಮದಲ್ಲಿ ಪ್ರಭುಗೌಡ ಯಕ್ಕಿಕೊಪ್ಪ ಅಭಿಪ್ರಾಯ

ಜೀವನದ ಉನ್ನತಿಗೆ ಬೆಳಕು ತೋರಿದವರು ರೇಣುಕಾಚಾರ್ಯರು

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಕಾಯಕ ಮತ್ತು ದಾಸೋಹದ ಮೂಲಕ ಜೀವನದ ಶ್ರೇಯಸ್ಸಿಗೆ ದಾರಿ ತೋರಿದ ಮೂಲ ಪುರುಷರು ಜಗದ್ಗುರು ರೇಣುಕಾಚಾರ್ಯರು. ಧರ್ಮದ ದಶಸೂತ್ರಗಳನ್ನು ಬೋಧಿಸಿ ಜೀವನದ ಉನ್ನತಿಗೆ ಬೆಳಕು ತೋರಿದವರು. ಸತ್ಯ ಮತ್ತು ಶಾಂತಿಯ ತಳಹದಿಯ ಮೇಲೆ ಸುಸಂಸ್ಕೃತ ಸಮಾಜ ನಿರ್ಮಿಸಲು ನಿರಂತರ ಶ್ರಮಿಸಿದ ಶಿವಾದ್ವೈತ ಜ್ಞಾನ ಸಂಪತ್ತನ್ನು ಕರುಣಿಸಿದ ಕಾರುಣ್ಯ ಶಕ್ತಿಯೇ ಪರಮ ಜಗದ್ಗುರುಗಳು ಎಂದು ಪ್ರಭುಗೌಡ ಯಕ್ಕಿಕೊಪ್ಪ ಅಭಿಪ್ರಾಯಪಟ್ಟರು.

ಪಟ್ಟಣದ ಶ್ರೀ ಸೋಮೇಶ್ವರ ದೇವಸ್ಥಾನದಲ್ಲಿ ಶ್ರೀ ಸೋಮೇಶ್ವರ ಭಕ್ತರ ಸೇವಾ ಟ್ರಸ್ಟ್ ಕಮಿಟಿ ವತಿಯಿಂದ ಪ್ರತಿ ಹುಣ್ಣಿಮೆಗೆ ನಡೆಸಿಕೊಂಡು ಬಂದಿರುವ ಪುಲಿಗೆರೆ ಪೌರ್ಣಿಮೆ ಸರಣಿ ಕಾರ್ಯಕ್ರಮದಲ್ಲಿ ಅವರು ಶ್ರೀ

ರೇಣುಕಾಚಾರ್ಯರ ಮಹಿಮೆ ವಿಷಯ ಕುರಿತು ಉಪನ್ಯಾಸ ನೀಡಿದರು.

ನಿವೃತ್ತ ಶಿಕ್ಷಕ, ಸಾಹಿತಿ ಎಚ್.ಜಿ. ದುರಗಣ್ಣವರ ಬರೆದ 'ಹೋರಾಟಮಯ ಜೀವನ' ಪುಸ್ತಕ ಬಿಡುಗಡೆಗೊಳಿಸಿ ಮಾತನಾಡಿದ ವಿಶ್ರಾಂತ ಮುಖ್ಯೋಪಾಧ್ಯಾಯೆ ಲಲಿತಕ್ಕ ಕೆರಿಮನಿ, ಪ್ರತಿಯೊಬ್ಬರ ಬದುಕಿಗೂ ಒಂದು ಅರ್ಥವಿದೆ, ಗುರಿಯಿದೆ. ಅದನ್ನು ಸಾಧಿಸುವಲ್ಲಿ ಪ್ರತಿಯೊಂದು ಹಂತದಲ್ಲಿಯೂ ಹೋರಾಟ ಮಾಡುವುದು ಮಾನವನ ಸಹಜ ಲಕ್ಷಣ. ಅಂತಹ ಹೋರಾಟ ಜೀವನವನ್ನು ವಿಶ್ರಾಂತ ಶಿಕ್ಷಕ ದುರ್ಗಣ್ಣವರ ಮನಮುಟ್ಟುವ ಹಾಗೆ ದಾಖಲಿಸಿದ್ದಾರೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

> ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಲಕ್ಷ್ಮೇಶ್ವರ ಪುರಸಭೆಯ ಮುಖ್ಯಾಧಿಕಾರಿ ಮಹೇಶ ಹಡಪದ, ಸೋಮೇಶ್ವರ ದೇವಸ್ಥಾನ ಟ್ರಸ್ಟ್ ಕಮಿಟಿ ಹಮ್ಮಿಕೊಂಡ ಈ ಕಾರ್ಯಕ್ರಮ ಸಮಾಜಕ್ಕೆ ಒಳ್ಳೆಯ ಸಂದೇಶ ನೀಡುವಂತಿದೆ ಎಂದರು. ಮುಖ್ಯ ಅತಿಥಿಯಾಗಿ ಪಾಲ್ಗೊಂಡಿದ್ದ ಉಪ ನೋಂದಣಾಧಿಕಾರಿ ಎಸ್. ಕೆ. ಜಲರೆಡ್ಡಿ, ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ ಟ್ರಸ್ಟ್ ಕಮಿಟಿ ಅಧ್ಯಕ್ಷ ಚಂಬಣ್ಣ ಬಾಳಿಕಾಯಿ ಮಾತನಾಡಿದರು. ಸಾಹಿತಿ ಹೆಚ್.ಜಿ. ದುರಗಣ್ಣವರ ತಮ್ಮ ಪುಸ್ತಕದ ಕುರಿತು ಅನುಭವ ಹಂಚಿಕೊಂಡರು.

ಕಾರ್ಯಕ್ರಮದಲ್ಲಿ ದೇವಣ್ಣ ಬಳಿಗಾರ, ನೀಲಪ್ಪ ಕರ್ಜಕ್ಕಣ್ಣನವರ, ಸುರೇಶ ರಾಚನಾಯ್ಕರ, ವಿರೂಪಾಕ್ಷಪ್ಪ ಆದಿ, ಪಿ.ಬಿ. ಖರಾಟೆ, ಎನ್.ಆರ್. ಸಾತಪೂತೆ, ಮಾಲಾ ದಂದರಗಿ, ಸುಮಾ ಚೊಟಗಲ್, ಎಸ್.ವ್ಹಿ. ಕನೋಜ, ಎಲ್.ಆರ್. ಮಲ್ಲಸಮುದ್ರ, ಎಸ್.ಎ. ಸಾತಣ್ಣನವರ, ಎಂ.ಎನ್. ಭರಮಗೌಡ್ರ, ನಾಗರಾಜ ಕಳಸಾಪೂರ, ಸೋಮಶೇಖರ ಕೆರಿಮನಿ, ಎಂ.ಎಸ್. ಹಿರೇಮಠ ಮುಂತಾದವರು ಉಪಸ್ಥಿತರಿದ್ದರು.

ವಿ.ಎಂ. ಹೂಗಾರ ಪ್ರಾರ್ಥಿಸಿದರು. ಟ್ರಸ್ಟ್ ಕಮಿಟಿ ಸಂಚಾಲಕ ಜಿ.ಎಸ್. ಗುಡಗೇರಿ ಸ್ವಾಗತಿಸಿದರು. ಸ್ನೇಹ ಹೊಟ್ಟಿ ನಿರೂಪಿಸಿದರು. ಪ್ರಧಾನ ಕಾರ್ಯದರ್ಶಿ ಈಶ್ವರ ಮೆಡ್ಲೇರಿ ವಂದಿಸಿದರು.

ಜಿಲ್ಲಾ ಮಹಿಳಾ ಪತಂಜಲಿ ಯೋಗ ಸಮಿತಿ ಆಶ್ರಯದಲ್ಲಿ ಮಹಿಳಾ ದಿನಾಚರಣೆ

ಮಹಿಳೆಯರಿಗೆ ಸಮಾನತೆ ನೀಡಿದ್ದು ಬಸವಣ್ಣನವರು

■ ವಿಜಯಸಾಕ್ಷಿ ಸುದ್ದಿ, ಗದಗ

ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆಯನ್ನು ವಿಶೇಷವಾಗಿ ಆಚರಿಸಿ ಸಂಭ್ರಮಿಸುತ್ತಿರುವುದು ಸಂತೋಷ. ಆದರೆ, ಸ್ವಾತಂತ್ರ್ಯ, ಹಕ್ಕು, ಸಮಾನತೆಯನ್ನು ವಿಶ್ವಗುರು ಬಸವಣ್ಣವರು ನಮಗೆ ಅಂದೇ ಕೊಟ್ಟಾಗಿದೆ. ಅಂದಿನಿಂದ ಈ ಸಮಾನತೆಯನ್ನು ನಾವು ಹೆಮ್ಮೆಯಿಂದ ಅನುಭವಿಸುತ್ತಿದ್ದೇವೆ ಎಂದು ನಗರದ ಪ್ರಖ್ಯಾತ ಪ್ರವಚನಕಾರರಾದ ಗಿರಿಜಕ್ಕ ಧರ್ಮರಡ್ಡಿ ನುಡಿದರು.

ಗದಗ ಜಿಲ್ಲಾ ಮಹಿಳಾ ಪತಂಜಲಿ ಯೋಗ ಸಮಿತಿ ಆಶ್ರಯದಲ್ಲಿ ಏರ್ಪಡಿಸಿದ್ದ ಮಹಿಳಾ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ, ಸನ್ಮಾನ ಸ್ವೀಕರಿಸಿ ಅವರು ಮಾತನಾಡಿದರು.

ಗದಗ ಜಿಲ್ಲಾ ಪತಂಜಲಿ ಯೋಗ ಸಮಿತಿ ಜಿಲ್ಲಾ ಪ್ರಭಾರಿಗಳಾದ ಆಂಜನೇಶ

ಮಾನೆ, ಪತಂಜಲಿ ಯೋಗ ಸಮಿತಿ ಖಜಾಂಚಿ ಕೆ.ಎಸ್. ಗುಗ್ಗರಿ, ಹಿರಿಯ ಯೋಗ ಶಿಕ್ಷಕಿ ಬಸಮ್ಮ ಹಡಗಲಿ, ಅಧ್ಯಕ್ಷತೆ ವಹಿಸಿದ್ದ ಗದಗ ಜಿಲ್ಲಾ ಮಹಿಳಾ ಪತಂಜಲಿ ಯೋಗ ಸಮಿತಿ ಜಿಲ್ಲಾ ಪ್ರಭಾರಿ ಶೋಭಾ ಗುಗ್ಗರಿ ಮಾತನಾಡಿದರು.

ಮಹಿಳಾ ಪತಂಜಲಿ ಯೋಗ ಸಮಿತಿಯಿಂದ ವರದಾನೇಶ್ವರಿ ಮಹಿಳಾ ಸಮಿತಿಯ ಶೈಲಾ ಖೋಡೆಕಲ್ ಹಾಗೂ ಸುರೇಖಾ ಪಿಳ್ಳಿಯವರನ್ನು ಶಾಲು ಹೊದೆಸಿ ಸನ್ಮಾನಿಸಲಾಯಿತು. ಈ ಸಂದರ್ಭದಲ್ಲಿ ಮುನಸಿಪಲ್ ಮೈದಾನದ ಕಕ್ಷೆಯವರು ಯೋಗಾಸನಗಳನ್ನೊಳಗೊಂಡ ನೃತ್ಯ ಪ್ರದರ್ಶನ ಮಾಡಿದರು. ನಾಗರತ್ನಾ ಬಡಿಗಣ್ಣವರ ಹಾಗೂ ಮಧು ಕೋಟಿಯವರು ಬವಿಕೆ ಹಾಡಿಗೆ ಪ್ರಾತ್ಯಕ್ಷಿಕೆಯೊಂದಿಗೆ ಅತ್ಯುತ್ತಮ ನೃತ್ಯ ಪ್ರದರ್ಶನ ಮಾಡಿ ಎಲ್ಲರ ಮನಸೆಳೆದರು. ಬಿ.ಪಿ ಹಾಗೂ ಮಧುಮೇಹಕ್ಕೆ ಸಂಬಂದಿಸಿದಂತೆ ಬ್ರಹ್ಮಕುಮ

ಹಳ್ಳ ಹಿಡಿದ ನೀರು ಸರಬರಾಜು ಯೋಜನೆ । ಲೆಕ್ಕಕ್ಕಿಲ್ಲದ ಪುರಸಭೆಯ ಶುದ್ಧ ನೀರಿನ ಘಟಕಗಳು

ಬೆಂಬಿಡದ ಬೇತಾಳದಂತಾದ ನೀರಿನ ಸಮಸ್ಯೆ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ತಾಲೂಕಿನ ಜನರ ಕುಡಿಯುವ ನೀರಿನ ಮೂಲಾಧಾರವಾದ ತುಂಗಭದ್ರಾ ನದಿಯಲ್ಲಿ ನೀರು ಬರಿದಾಗಿದ್ದು, ಪಟ್ಟಣ ಸೇರಿ ತಾಲೂಕಿನಾದ್ಯಂತ ಕಳೆದ 10-12 ದಿನಗಳಿಂದ ಮತ್ತೆ ಕುಡಿಯುವ ನೀರಿಗಾಗಿ ಜನತೆ ಪರದಾಡಬೇಕಾದ ಪರಿಸ್ಥಿತಿ ನಿರ್ಮಾಣವಾಗಿದೆಯಲ್ಲದೆ ಇನ್ನೂ 2 ತಿಂಗಳು ಬೇಸಿಗೆ ಕಳೆಯುವುದು ಹೇಗೆ ಎಂಬ ಚಿಂತೆ ಜನರನ್ನು ಕಾಡುತ್ತಿದೆ.

ಹಾವೇರಿ ಜಿಲ್ಲೆಯ ತೆರದಹಳ್ಳಿ ಗ್ರಾಮದ ಹತ್ತಿರ ತುಂಗಭದ್ರಾ ನದಿಪಾತ್ರದಿಂದ ಲಕ್ಷ್ಮೇಶ್ವರ ಸೇರಿ ಮಾರ್ಗದ ಹಳ್ಳಿಗಳಿಗೆ ನೀರು ಸರಬರಾಜು ಮಾಡಲು ಜಾಕ್‌ವೆಲ್, ಪಂಪ್‌ಹೌಸ್ ನಿರ್ಮಾಣ ಮಾಡಲಾಗಿದೆ. ಪಂಪ್‌ಹೌಸ್, ಜಾಕ್‌ವೆಲ್ ಇರುವ ಭಾಗದಲ್ಲಿ ನದಿ ನೀರು ನಿಲ್ಲುವ ವ್ಯವಸ್ಥೆ ಇಲ್ಲದ್ದರಿಂದ ನದಿಯಲ್ಲಿ ನೀರಿದ್ದಾಗ ಮಾತ್ರ

ನೀರು ಸರಬರಾಜಾಗುತ್ತದೆ. ತಾತ್ಕಾಲಿಕವಾಗಿ ಸ್ಯಾಂಡ್ ಬ್ಯಾರೇಜ್ ನಿರ್ಮಿಸಿ ನೀರು ತಡೆದಿಡುವ ಪ್ರಯತ್ನವೂ ಆಗಲಿಲ್ಲ. ಈ ನಡುವೆ ರೈತರು ಅನಧಿಕೃತ ಪಂಪ್‌ಸೆಟ್ ಅಳವಡಿಕೆ ತಡೆಯುವ ಕಟ್ಟುನಿಟ್ಟಿನ ಕ್ರಮವೂ ಜಾರಿಯಾಗಿಲ್ಲ.

25 ವರ್ಷಗಳ ಹಿಂದೆ ಪ್ರಾರಂಭವಾದ ಈ ಯೋಜನೆಗೆ ಅಳವಡಿಸಿದ ಪೈಪ್‌ಲೈನ್, ಯಂತ್ರೋಪಕರಣಗಳು ಹಳೆಯದಾಗಿ ಆಟಕ್ಕುಂಟು ಲೆಕ್ಕಕ್ಕಿಲ್ಲ ಎಂಬ ಪರಿಸ್ಥಿತಿಯಾಗಿದೆ. ಪದೇ ಪದೇ ಪೈಪ್‌ಲೈನ್, ಯಂತ್ರೋಪಕರಣ ದುರಸ್ಥಿ, ವಿದ್ಯುತ್ ಸಮಸ್ಯೆ, ನೀರಿನ ಕೊರತೆಯಿಂದ ಪ್ರತಿ ಬೇಸಿಗೆಯಲ್ಲೂ ನೀರಿನ ಸಮಸ್ಯೆ ಬೇತಾಳದಂತೆ ಕಾಡುತ್ತದೆ.

ಪಟ್ಟಣದಲ್ಲಿ ತಿಂಗಳುಗಟ್ಟಲೇ ನೀರು ಬರದಿದ್ದರೂ ಜನತೆ ಸಮಾಧಾನದಿಂದ ಇರಲು ಕಾರಣ ಸಾರ್ವಜನಿಕ ಸ್ಥಳಗಳಲ್ಲಿ ಸವಳು ನೀರಾದರೂ ಬರುತ್ತಿರುವುದು. ಆದರೆ, ಪುರಸಭೆ ವ್ಯಾಪ್ತಿಯಲ್ಲಿ 104 ಬೋರ್‌ವೆಲ್‌ಗಳಿದ್ದರೂ ಪ್ರಸ್ತುತ ಕೇವಲ

> ಹೊಸ ಪೈಪ್‌ಲೈನ್ ಯೋಜನೆ ಸಾಕಾರ ಗೊಳಿಸಬೇಕು. ದಶಕಗಳ ಕೂಗಿಗೆ ಆಳುವ ಸರ್ಕಾರ ಮತ್ತು ಜನ ಪ್ರತಿನಿಧಿಗಳು ಕ್ಯಾರೇ ಎನ್ನುತ್ತಿಲ್ಲ. ನಿರ್ವಹಣೆಗೆ ನೀರಿನಂತೆ ಹಣ ಖರ್ಚು ಮಾಡುತ್ತಿದ್ದು, ಪಟ್ಟಣದ ಅಭಿವೃದ್ಧಿಗೆ ಹಿನ್ನೆಡೆಯಾಗಿದೆ. ಜಿಲ್ಲಾ ಉಸ್ತುವಾರಿ ಸಚಿವರು, ಶಾಸಕರು, ಜಿಲ್ಲಾಧಿಕಾರಿಗಳು ಪಟ್ಟಣದ ಕುಡಿಯುವ ನೀರಿನ ಸಮಸ್ಯೆಯ ಶಾಶ್ವತ ಪರಿಹಾರಕ್ಕೆ ಮುಂದಾಗದಿದ್ದರೆ ಬೆಳೆಯುತ್ತಿರುವ ಪಟ್ಟಣದಲ್ಲಿ ನೀರಿನ ಸಮಸ್ಯೆ ನಿವಾರಣೆಯೇ ದೊಡ್ಡ ಸವಾಲಾಗಲಿದೆ.
>
> – **ಪ್ರವೀಣ ಬಾಳಿಕಾಯಿ.** ಪುರಸಭೆ ಸದಸ್ಯ.

34 ಬೋರ್‌ವೆಲ್‌ಗಳು ಮಾತ್ರ ನೀರುಣಿಸುತ್ತಿವೆ. ಅವುಗಳಲ್ಲಿಯೂ ಅಂತರ್ಜಲ ಮಟ್ಟ ಸಂಪೂರ್ಣ ಕುಸಿದಿದ್ದು, ಮೋಟರ್‌ಗಳು ದುರಸ್ಥಿಗೊಳಗಾಗುತ್ತಿವೆ. ಇದೀಗ ಹೋಳಿ ಹುಣ್ಣಿಮೆಗೆ ಮನೆಯ ಮಕ್ಕಳಿಗೆ ಬಣ್ಣ ಆಡಲೂ ಬಿಡದಂತಹ ಪರಿಸ್ಥಿತಿ ನಿರ್ಮಾಣವಾಗಿದೆ.

ಪಟ್ಟಣದ ಅನೇಕ ಕಡೆ ಬೋರ್‌ವೆಲ್ ನೀರಿನ ವ್ಯವಸ್ಥೆಯೂ ಇಲ್ಲದ್ದರಿಂದ ಸೈಕಲ್, ಬೈಕ್, ತಳ್ಳುವ ಗಾಡಿಯ ಮೂಲಕ ನೀರಿಗಾಗಿ ಅಲೆಯುತ್ತಿದ್ದಾರೆ. ಬಡವ-ಶ್ರೀಮಂತ ಎನ್ನದೇ ಬಹುತೇಕ ಜನರು ಅನಿವಾರ್ಯವಾಗಿ ಟ್ಯಾಂಕರ್ ನೀರಿಗೆ ಮೊರೆ ಹೋಗಿದ್ದು, ಬೇಡಿಕೆ ಹೆಚ್ಚಿದ್ದರಿಂದ ಪ್ರತಿ ಟ್ಯಾಂಕರ್

ನೀರಿಗೆ 300 ರೂ.ಟುಂದ 400-450 ರೂ ಹೆಚ್ಚಿಗೆ ಪಡೆಯುತ್ತಿದ್ದಾರೆ.

ಕುಡಿಯಲು ನದಿ ನೀರು ಇಲ್ಲದ್ದರಿಂದ ಬಹುತೇಕ ಜನರು ಶುದ್ಧ ನೀರಿನ ಘಟಕಗಳ ಮೊರೆ ಹೋಗಿದ್ದಾರೆ. ಪುರಸಭೆಯ ಶುದ್ಧ ನೀರಿನ ಘಟಕಗಳು ಆಟಕ್ಕುಂಟು ಲೆಕ್ಕಕ್ಕಿಲ್ಲ. ಈ ಕಾರಣದಿಂದ ಖಾಸಗಿಯವರ ಶುದ್ಧ ನೀರಿನ ಘಟಕಗಳ ಮುಂದೆ ಹಗಲೂ ರಾತ್ರಿ ಪಾಳಿ ನಿಲ್ಲುವಂತಾಗಿದೆ. ಕೃಷಿ ಕೆಲಸಕ್ಕೆ ಮತ್ತು ಮೇಯಲು ಹೋದ ಜಾನುವಾರುಗಳು ಬಿಸಿಲ ತಾಪಕ್ಕೆ ಅಡವಿಲ್ಲಿ ಬಾಯಾರಿಕೆಯಿಂದ ಏದುಸಿರು

> ತುಂಗಭದ್ರಾ ನದಿಗೆ ಭದ್ರಾ ಜಲಾಶಯದಿಂದ ಮಾ.29ರಂದು ನೀರು ಬಿಡಲಾಗುತ್ತದೆ. ನದಿ ಪಾತ್ರದಲ್ಲಿ ನೀರು ಸಂಗ್ರಹಣೆಗೆ ತಾತ್ಕಾಲಿಕ ಪರಿಹಾರದ ಕ್ರಮ ಕೈಗೊಳ್ಳಲು ಮತ್ತು ಬೋರ್‌ವೆಲ್ ಮೂಲಕ ನೀರು ಕೊಡುವ ವ್ಯವಸ್ಥೆಯನ್ನು ಇನ್ನಷ್ಟು ಚುರುಕುಗೊಳಿಸಲು ಹಾಗೂ ಅನಧಿಕೃತ ಪಂಪ್‌ಸೆಟ್ ಅಳವಡಿಸದಂತೆ ನಿಗಾವಹಿಸಲು ಮುಖ್ಯಾಧಿಕಾರಿಗೆ ಸೂಚಿಸಲಾಗಿದೆ. ಸಾರ್ವಜನಿಕರು ನೀರನ್ನು ಮಿತವ್ಯಯವಾಗಿ ಬಳಸಬೇಕು ಮತ್ತು ನೀರು ಪೋಲಾಗಂತೆ ಸಹಕರಿಸಬೇಕು.
>
> – **ವೈಶಾಲಿ ಎಂ.ಎಲ್.** ಜಿಲ್ಲಾಧಿಕಾರಿಗಳು.

ಬಿಡುತ್ತವೆ. ಕೃಷಿಕರಿಗಂತೂ ಜಾನುವಾರುಗಳಿಗೆ ನೀರು ಪೊರೈಸುವದೇ ಸವಾಲಾಗಿದೆ.

ಪಟ್ಟಣದ ವ್ಯಾಪ್ತಿಯ 23 ವಾರ್ಡ್‌ಗಳಲ್ಲಿ ನೀರಿನ ಸಮಸ್ಯೆ ಇದ್ದರೂ ಆಡಳಿತ ಮಂಡಳಿಯವರ ಅಧಿಕಾರ ಇಲ್ಲದ್ದರಿಂದ ಜನಪ್ರತಿನಿಧಿಗಳು ಜಾಣ ಕುರುಡುತನ ವಹಿಸಿದ್ದಾರೆ. ನೀರಿನ ಸಮಸ್ಯೆ ಪರಿಹಾರಕ್ಕೆ ಈ ಭಾಗದ ಸಂಸದರು, ಸಚಿವರು, ಶಾಸಕರು, ಅಧಿಕಾರಿಗಳು ಸಂಪೂರ್ಣ ನಿರ್ಲಕ್ಷ ತೋರಿದ್ದರಿಂದಲೇ ಹತ್ತಾರು ವರ್ಷಗಳ ಸಮಸ್ಯೆಗೆ ಪರಿಹಾರ ಸಿಗದಂತಾಗಿದೆ.

'ಕೆ. ಶಿವರಾಮ್ ನೆನಪು' ಕಾರ್ಯಕ್ರಮದಲ್ಲಿ ಬಸವರಾಜ ಕಡೇಮನಿ

ಕೆ. ಶಿವರಾಮ್ ಬಡವರ ಪರವಾಗಿದ್ದರು

■ ವಿಜಯಸಾಕ್ಷಿ ಸುದ್ದಿ, ಗದಗ

ಪ್ರಪ್ರಥಮವಾಗಿ ಕನ್ನಡದಲ್ಲಿ ಐಎಎಸ್ ಪರೀಕ್ಷೆ ಪಾಸಾಗಿ ಉನ್ನತ ಹುದ್ದೆಗೇರಿದ ಶ್ರೇಯಸ್ಸು ಕೆ. ಶಿವರಾಮ್ ಅವರದಾಗಿದೆ. ಅವರು ಸೇವೆಯಲ್ಲಿ ಜಿಲ್ಲಾ ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿಗಳಾಗಿ, ರಾಜ್ಯದ ವಿವಿಧ ಜಿಲ್ಲೆಗಳ ಜಿಲ್ಲಾಧಿಕಾರಿಗಳಾಗಿ ಹಾಗೂ ಸಮಾಜ ಕಲ್ಯಾಣ ಇಲಾಖೆಯ ಆಯುಕ್ತರಾಗಿ ಕೆಲಸ ನಿರ್ವಹಿಸಿ ರಾಜ್ಯದ ದಲಿತರ ಪರವಾಗಿ ಅನೇಕ ಕಾರ್ಯಕ್ರಮಗಳನ್ನು ಅನುಷ್ಠಾನಕ್ಕೆ ತಂದಿದ್ದರು ಎಂದು ಕೆ. ಶಿವರಾಮ್ ಅವರ ಒಡನಾಡಿಯಾಗಿದ್ದ ಬಸವರಾಜ ಕಡೇಮನಿ ನುಡಿದರು.

ಅವರು ನಗರದ ಕಬ್ಬಿಗರ ಕೂಟ ಸಾಹಿತ್ಯ ಭವನದಲ್ಲಿ ನಡೆದ 'ಕೆ. ಶಿವರಾಮ್ ನೆನಪು' ಕಾರ್ಯಕ್ರಮದಲ್ಲಿ ಮಾತನಾಡುತ್ತಿದ್ದರು.

ಅವರು ರಾಜಕೀಯವಾಗಿ ಬಹಳ ಎತ್ತರಕ್ಕೆ ಬೆಳೆಯಬೇಕಿತ್ತು. ಅವರು ಮಾಡಿದ ಕೆಲಸಗಳು ರಾಜ್ಯದ ತುಂಬೆಲ್ಲಾ ಇಂದು

ಜನತೆ ನೆನಪಿಸಿಕೊಂಡು ಅವರನ್ನು ಸ್ಮರಿಸುತ್ತಾರೆ. ಅದರಲ್ಲೂ ದಲಿತ ಮಹಿಳೆಯರಿಗೆ ಮೊಟ್ಟ ಮೊದಲು ಸಮಾಜ ಕಲ್ಯಾಣ ಇಲಾಖೆಯಿಂದ ಉಚಿತ ಪೈಲೆಟ್ ತರಬೇತಿಯನ್ನು ಪ್ರಾರಂಭಿಸಿದ ಕೀರ್ತಿ ಕೆ. ಶಿವರಾಮ್ ಅವರಿಗೆ ಸಲ್ಲುತ್ತದೆ ಎಂದರು.

ಈ ಸಂದರ್ಭದಲ್ಲಿ ಗದಗ ಜಿಲ್ಲಾ ಛಲವಾದಿ ಮಹಾಸಭಾ ಜಿಲ್ಲಾಧ್ಯಕ್ಷರಾದ ಆನಂದ ಸಿಂಗಾಡಿ, ಸಮುದಾಯದ ಹಿರಿಯರಾದ ಪ್ರಕಾಶ ಕಾಳೆ, ವಸಂತ ಕಲಕಂಬಿ, ನಿಂಗಪ್ಪ ಕಾಳೆ, ಬಾಲರಾಜ ಅರಬರ, ಸತ್ಯಪ್ಪ ಸತ್ಯಣ್ಣವರ, ದೇವಪ್ಪ ಚಲವಾದಿ, ನಾಗರಾಜ ಅಡವಿ, ಅಜಯ ಪಾಟೀಲ, ಶಿವು ತಮ್ಮಣ್ಣವರ, ಶಿವಾನಂದ ಕರಿಯಣ್ಣವರ, ವಾಸಂತಿ ಮಲ್ಲಾಪೂರ, ಮಂಜು ಗೊಂದಿ, ಬಸವರಾಜ ಹಗೆದಾಳ, ಬಿ.ಕೆ. ಕೊಳಪ್ಪನವರ, ಗುರುರಾಜ ಸಂಕಣ್ಣವರ, ಶರೀಫ ಬಿಳೆಯಲಿ, ಮುತ್ತು ಬಿಳೆಯಲಿ, ಪರಶು ಕಾಳೆ, ಅನಿಲ ಕಾಳೆ ಉಪಸ್ಥಿತರಿದ್ದರು.

> ಇದೇ ಸಂದರ್ಭದಲ್ಲಿ ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಸದಸ್ಯರನ್ನಾಗಿ ಬಸವರಾಜ ಕಡೇಮನಿ, ಗ್ಯಾರಂಟಿ ಯೋಜನೆಯ ಅನುಷ್ಠಾನ ಸಮಿತಿಯ ಸದಸ್ಯರನ್ನಾಗಿ ಶಂಭು ಕಾಳೆ, ರೋಣ ತಾಲೂಕ ಅಕ್ರಮ-ಸಕ್ರಮ ಸಮಿತಿಯ ಸದಸ್ಯರನ್ನಾಗಿ ಸಂಜಯ ದೊಡ್ಡಮನಿಯವರನ್ನು ಆಯ್ಕೆ ಮಾಡಿದ ಸರ್ಕಾರ ಹಾಗೂ ಸಚಿವರಾದ ಡಾ. ಎಚ್.ಕೆ. ಪಾಟೀಲರಿಗೆ ಹಾಗೂ ರೋಣ ಶಾಸಕ ಜಿ.ಎಸ್. ಪಾಟೀಲರಿಗೆ ಗದಗ ಜಿಲ್ಲಾ ಛಲವಾದಿ ಮಹಾಸಭಾದಿಂದ ಅಭಿನಂದನೆ ಸಲ್ಲಿಸಲಾಯಿತು.

ರೋಣ ತಾಲೂಕಾ ಜೆಡಿಎಸ್ ಅಧ್ಯಕ್ಷರಾಗಿ ಶಿವಕುಮಾರ ಶಿರಹಟ್ಟಿ ನೇಮಕ

ಪಕ್ಷ ಸಂಘಟನೆಗೆ ಹೆಚ್ಚಿನ ಒತ್ತು ನೀಡಿ

■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ರೋಣ ತಾಲೂಕಿನ ಜೆಡಿಎಸ್ ಅಧ್ಯಕ್ಷರಾಗಿ ಶಿವಕುಮಾರ ಶಿರಹಟ್ಟಿ ನೇಮಕಗೊಂಡಿದ್ದಾರೆ. ಜಿಲ್ಲಾ ಜೆಡಿಎಸ್ ಅಧ್ಯಕ್ಷ ಎಂ.ವೈ. ಮುಧೋಳ ಈ ನೇಮಕಾತಿಯನ್ನು ಮಾಡಿದ್ದು, ಸೋಮವಾರ ಕೋಡಿಕೊಪ್ಪದ ಜೆಡಿಎಸ್ ಕಚೇರಿಯಲ್ಲಿ ನೇಮಕಾತಿ ಪತ್ರಗಳನ್ನು ವಿತರಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಮುಧೋಳ, ಜೆಡಿಎಸ್ ಪಕ್ಷದ ರಾಷ್ಟ್ರಾಧ್ಯಕ್ಷ ಎಚ್.ಡಿ. ದೇವೇಗೌಡರ ಬಡವರ ಹಿತವನ್ನು ಕಾಯುತ್ತ ಬಂದಿದ್ದಾರೆ. ಈ ಪಕ್ಷದಲ್ಲಿ ಯುವಕರಿಗೆ ಒಳ್ಳೆಯ ಭವಿಷ್ಯವಿದೆ. ಪಕ್ಷದ ರಾಜ್ಯಾಧ್ಯಕ್ಷ ಕುಮಾರಸ್ವಾಮಿಯವರು ಎಂದಿಗೂ ಯುವಕರನ್ನು ಪ್ರೋತ್ಸಾಹಿಸುತ್ತ ಬಂದಿದ್ದಾರೆ. ರೋಣ ತಾಲೂಕಿಗೆ ನೇಮಕಗೊಂಡಿರುವ ಎಲ್ಲ ಪದಾಧಿಕಾರಿಗಳು ತಾಲೂಕಿನಲ್ಲಿ ಪಕ್ಷ ಸಂಘಟನೆಗೆ ಹೆಚ್ಚಿನ ಒತ್ತನ್ನು ನೀಡಿ ಪಕ್ಷವನ್ನು ಬಲಪಡಿಸಬೇಕೆಂದು ತಿಳಿಸಿದರು.

ವರಿಷ್ಠ ಮಂಡಳಿಯ ಆದೇಶದ ಮೇರೆಗೆ ನಾವು ಹಾವೇರಿ-ಗದಗ

ಲೋಕಸಭಾ ಕ್ಷೇತ್ರದಲ್ಲಿ ಬಸವರಾಜ ಬೊಮ್ಮಾಯಿಯವರನ್ನು ಮತ್ತು ಬಾಗಲಕೋಟೆ ಲೋಕಸಭಾ ಕ್ಷೇತ್ರದಲ್ಲಿ ಪಿ.ಸಿ. ಗದ್ದಿಗೌಡರ ಅವರನ್ನು ಗೆಲ್ಲಿಸಲೇ ಬೇಕಾದ ಕಾರ್ಯ ವಹಿಸಿದ್ದಾರೆ. ಈ ಮೂಲಕ ಈ ಸಾರೆಯೂ ಮತ್ತೊಮ್ಮೆ ನರೇಂದ್ರ ಮೋದಿಯವರು ದೇಶದ ಪ್ರಧಾನ ಮಂತ್ರಿಯಾಗಲು ಅನುವು ಮಾಡಿಕೊಡಬೇಕೆಂದು ತಿಳಿಸಿದ್ದಾರೆ. ಈ ದಿಶೆಯಲ್ಲಿಯೂ ನಿಮ್ಮ ಕಾರ್ಯ ಚುರುಕಿನಿಂದ ಸಾಗಬೇಕಿದ್ದು, ಬಿಜೆಪಿ ಕಾರ್ಯಕರ್ತರೊಂದಿಗೆ ಹೊಂದಾಣಿಕೆ ಮಾಡಿಕೊಂಡು ಈರ್ವರೂ ಅಭ್ಯರ್ಥಿಗಳ ಜಯಕ್ಕೆ ಕಾರಣರಾಗಬೇಕೆಂದು ಮುಧೋಳ

> ತಾಲೂಕಾ ಅಧ್ಯಕ್ಷ ಶಿವಕುಮಾರ ಶಿರಹಟ್ಟಿ ಮಾತನಾಡಿ, ನಿಮ್ಮ ಮಾರ್ಗದರ್ಶನದಲ್ಲಿ ತಾಲೂಕಿನಲ್ಲಿ ಪಕ್ಷವನ್ನು ಸಂಘಟಿಸಲು ಶಕ್ತಿ ಮೀರಿ ಪ್ರಯತ್ನಿಸುತ್ತೇವೆ. ಯುವಕರನ್ನು ಕರೆ ತಂದು ಪಕ್ಷಕ್ಕೆ ಬಲ ತುಂಬುತ್ತೇವೆ ಎಂದರು.

ನೂತನ ಪದಾಧಿಕಾರಿಗಳಿಗೆ ತಿಳಿಸಿದರು.

ಉಪಾಧ್ಯಕ್ಷ ಶಂಕರಗೌಡ ಪಾಟೀಲ, ಎಸ್.ಸಿ. ಘಟಕದ ಅಧ್ಯಕ್ಷ ರಘು ಕಟ್ಟಿಮನಿ, ಸಂಘಟನಾ ಕಾರ್ಯದರ್ಶಿ ಪರಶುರಾಮ ವಾಲ್ಮೀಕಿ, ತಾಲೂಕಾ ಯುವ ಘಟಕದ ಅಧ್ಯಕ್ಷ ವೀರೇಶ ಆರಾಧ್ಯಮಠ ಮಾತನಾಡಿದರು.

ಈ ಸಂದರ್ಭದಲ್ಲಿ ಜಿಲ್ಲಾ ಉಪಾಧ್ಯಕ್ಷ ವೀರಪ್ಪ ಜಿರ್ಲ, ಗಜೇಂದ್ರಗಡ ತಾಲೂಕಾ ಉಪಾಧ್ಯಕ್ಷ ರಕ್ಷಿತಗೌಡ ಪಾಟೀಲ, ಅಲ್ಪ ಸಂಖ್ಯಾತ ಘಟಕದ ಅಧ್ಯಕ್ಷ ಬಾದಶಹಾ ಬಾಗವಾನ, ಕೊಚಲಾಪುರ ಗ್ರಾಮ ಅಧ್ಯಕ್ಷ ಬುಡ್ಡಾಸಾಹೇಬ ಚಕೇರಿ, ನರೇಗಲ್ಲ ಹೋಬಳಿ ಅಧ್ಯಕ್ಷ ಯಲ್ಲಪ್ಪ ಹೊಸಮನಿ, ಕಾರ್ಯಾಧ್ಯಕ್ಷ ಅಶೋಕ ಬೆಟಗೇರಿ, ರೋಣ ತಾಲೂಕಾ ಸಂಘಟನಾ ಕಾರ್ಯದರ್ಶಿ ಹಾಲಪ್ಪ ಮರಲಿಂಗಣ್ಣವರ ಮುಂತಾದವರು ಉಪಸ್ಥಿತರಿದ್ದರು.

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಶಿರಹಟ್ಟಿ ಮತಕ್ಷೇತ್ರದ ಶಾಸಕ ಡಾ. ಚಂದ್ರು ಲಮಾಣಿ ಭಾರತೀಯ ಜನತಾ ಪಾರ್ಟಿಯ ಎಸ್.ಸಿ ಮೋರ್ಚಾದ ರಾಜ್ಯ ಉಪಾಧ್ಯಕ್ಷರಾಗಿ ಆಯ್ಕೆಯಾಗಿದ್ದಾರೆ. ಬಿಜೆಪಿ ಎಸ್‌ಸಿ ಮೋರ್ಚಾದ ರಾಜ್ಯ ಅಧ್ಯಕ್ಷ ಎಸ್. ಮಂಜುನಾಥ ಆದೇಶ ಪತ್ರ ನೀಡಿದರು.

ಶ್ರೀ ಕ್ಷೇತ್ರ ಬಂಗಾರಮಕ್ಕಿಯಲ್ಲಿ ವರ್ಧಂತಿ ಮಹೋತ್ಸವ

■ ವಿಜಯಸಾಕ್ಷಿ ಸುದ್ದಿ, ಹೊನ್ನಾವರ

ಶ್ರೀ ಕ್ಷೇತ್ರ ಬಂಗಾರಮಕ್ಕಿಯ ಶ್ರೀ ವಿಶ್ವ ವೀರಾಂಜನೇಯ ಮಹಾ ಸಂಸ್ಥಾನ, ಶ್ರೀ ವೀರಾಂಜನೇಯ ಧಾರ್ಮಿಕ ಹಾಗೂ ದತ್ತಿ ಸಂಸ್ಥೆ ಇವುಗಳ ಸಂಯುಕ್ತ ಆಶ್ರಯದಲ್ಲಿ ಮಾ.29 ಮತ್ತು 30ರಂದು ಶ್ರೀ ವೀರಾಂಜನೇಯ ದೇವರ, ಶ್ರೀ ಗೋಪಾಲಕೃಷ್ಣ ದೇವರ, ಶ್ರೀ ಅನ್ನಪೂರ್ಣೇಶ್ವರಿ ದೇವಿಯ ಶ್ರೀ ಚೌಡೇಶ್ವರಿ ದೇವಿಯ ವರ್ಧಂತಿ ಉತ್ಸವ ಆಯೋಜನೆಗೊಂಡಿದೆ.

ಇದರಂಗವಾಗಿ ಮಾ.29ರಂದು ಗಣಪತಿ ಪೂಜೆ, ಪುಣ್ಯಾಹ, ಶ್ರೀ ದೇವರ ಕಲಾವೃದ್ಧಿ ಹವನ, 28 ನಾಳಿಕೇರ ಗಣಹವನ ಆಯೋಜಿಸಲಾಗಿದೆ. ಸಂಜೆ ರಾಕ್ಷೋಘ್ನ ಪಾರಾಯಣ, ತಾರಕ ಮಂತ್ರ ಜಪ, ಆಂಜನೇಯ ಮೂಲಮಂತ್ರ ಜಪ, ಕಲಶ ಸ್ಥಾಪನೆ, ಮಾ.30ರಂದು ಶತರುದ್ರ ಪಾರಾಯಣ, ರುದ್ರಾಭಿಷೇಕ-ರುದ್ರಹವನ, ಆಂಜನೇಯ ಮೂಲಮಂತ್ರ ಹವನ, ರಾಜೋಪಚಾರ ಸೇವೆ, ಪಲ್ಲಕ್ಕಿ ಉತ್ಸವ, ಮಹಾಪೂಜೆ, ತೀರ್ಥಪ್ರಸಾದ ವಿತರಣೆ, ಸಂತರ್ಪಣೆ ನಡೆಯಲಿದೆ.

ಈ ಸಂದರ್ಭದಲ್ಲಿ ಅಹೋರಾತ್ರಿ ಭಜನಾ ಕಾರ್ಯಕ್ರಮ ಹಾಗೂ ರಾತ್ರಿ 9:30ರಿಂದ ಯಕ್ಷಗಾನ ಸೇವೆ ನಡೆಯಲಿದೆ. ಮಾ.30ರಂದು ಸಂಜೆ ಪಲ್ಲಕ್ಕಿ ಉತ್ಸವ, ರಾಜೋಪಚಾರ ಸೇವೆ, ರಂಗಪೂಜೆ, ಮಂಗಳಾರತಿ, ತೀರ್ಥಪ್ರಸಾದ ವಿತರಣೆ, ಸಂತರ್ಪಣೆ ನಡೆಯಲಿದ್ದು, ಸೇವೆಯಲ್ಲಿ ಪಾಲ್ಗೊಳ್ಳಲು ಇಚ್ಛಿಸುವ ಸೇವಾರ್ಥಿಗಳು ದೇವಾಲಯದ ಸೇವಾ ಕಚೇರಿ, ಮೊ-6361011288, 7019342699ರಲ್ಲಿ ಸಂಪರ್ಕಿಸಬಹುದು ಎಂದು ಶ್ರೀ ಕ್ಷೇತ್ರದ ಆಡಳಿತಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮನೋವೈದ್ಯ ಡಾ. ಸಿ.ಆರ್. ಚಂದ್ರಶೇಖರ ಅವರೊಂದಿಗೆ 'ಮಾಸದ ಮಾತು'

ಮನಸ್ಸಿನ ಸಮತೋಲನಕ್ಕೆ ಸ್ಥಿತಪ್ರಜ್ಞೆ ಅಗತ್ಯ

■ ವಿಜಯಸಾಕ್ಷಿ ಸುದ್ದಿ, ಗದಗ

ವ್ಯಕ್ತಿ ತನ್ನ ಇತಿ-ಮಿತಿಗಳನ್ನು ಅರಿತು ಬದುಕನ್ನು ನಡೆಸಬೇಕು. ಅತಿ ಆಸೆ, ಹಪಾಹಪಿತನ ವ್ಯಕ್ತಿಯಲ್ಲಿ ಉದ್ವೇಗ, ಭಯ, ಗೊಂದಲಗಳನ್ನು ಸೃಷ್ಟಿಸಿ ಮಾನಸಿಕ ಒತ್ತಡಗಳನ್ನು ಉಂಟುಮಾಡುತ್ತದೆ. ಆಹಾರದಿಂದ ಆರೋಗ್ಯ ನಿರ್ಮಾಣವಾಗುತ್ತಿದ್ದು, ಬದಲಾದ ಜೀವನ ಶೈಲಿ ಮಾನಸಿಕ ಸಮಸ್ಯೆಗಳಿಗೆ ಕಾರಣವಾಗಿದೆ. ವ್ಯಕ್ತಿ ಸುಖ-ದುಃಖಗಳನ್ನು ಸಮಾನವಾಗಿ ಸ್ವೀಕರಿಸುವ ಸ್ಥಿತಪ್ರಜ್ಞೆಯನ್ನು ಹೊಂದುವದು ಅಗತ್ಯವಾಗಿದೆ ಎಂದು ಪದ್ಮಶ್ರೀ ಪುರಸ್ಕೃತ ಮನೋವೈದ್ಯ ಡಾ. ಸಿ.ಆರ್. ಚಂದ್ರಶೇಖರ ನುಡಿದರು.

ಅವರು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಗದಗ ಏರ್ಪಡಿಸಿದ್ದ 'ಮಾಸದ ಮಾತು' ಕಾರ್ಯಕ್ರಮದಲ್ಲಿ ಮಾತನಾಡಿದರು.

ಮುಖ್ಯ ಅತಿಥಿಯಾಗಿ ಪಾಲ್ಗೊಂಡಿದ್ದ ಡಾ. ಜಿ.ಬಿ. ಪಾಟೀಲ ಮಾತನಾಡಿ, ಮಾನಸಿಕ ಡಾ. ಚಂದ್ರಶೇಖರರು ವೈದ್ಯರಾಗಿ ಸೇವೆ ಸಲ್ಲಿಸಿ ನಿವೃತ್ತಿಯಾದರೂ ನಿರಂತರವಾಗಿ ರಾಜ್ಯದ ಎಲ್ಲ ಭಾಗಗಳ ವಿದ್ಯಾ ಸಂಸ್ಥೆಗಳಿಗೆ ಹೋಗಿ ಮಾನಸಿಕ ಆರೋಗ್ಯದ ಕುರಿತು ಉಪನ್ಯಾಸ, ಪುಸ್ತಕಗಳ ವಿತರಣೆ ಮಾಡಿ ಜಾಗೃತಿ

ಮೂಡಿಸುತ್ತಿದ್ದಾರೆಂದರು.

ಇದೇ ಸಂದರ್ಭದಲ್ಲಿ ಮಾನಸಿಕ ಆರೋಗ್ಯಕ್ಕೆ ಸಂಬಂಧಿಸಿದ 6 ಪುಸ್ತಕಗಳನ್ನು ಲೋಕಾರ್ಪಣೆಗೊಳಿಸಲಾಯಿತು. ಅಧ್ಯಕ್ಷತೆ ವಹಿಸಿದ್ದ ಜಿಲ್ಲಾ ಕಸಾಪ ಅಧ್ಯಕ್ಷ ವಿವೇಕಾನಂದಗೌಡ ಪಾಟ